ಸಂಪುಟ 01 । ಸಂಚಿಕೆ 64 । ಬುಧವಾರ 14 ಜನವರಿ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**01) ಮಕರ ಸಂಕ್ರಾಂತಿ**

ಈ ವರ್ಷ ಇದನ್ನು ಜನವರಿ 14 ರಂದು ಆಚರಿಸಲಾಗುವುದು ಮತ್ತು ಚಳಿಗಾಲದ ಅಂತ್ಯ ಮತ್ತು ಹೊಸ ಸುಗ್ಗಿಯ ಋತುವಿನ ಆರಂಭವನ್ನು ಸೂಚಿಸುತ್ತದೆ.

**02)ಪೊಂಗಲ್**

ಭಾರತದಲ್ಲಿ ಅತ್ಯಂತ ಜನಪ್ರಿಯ ಹಬ್ಬಗಳಲ್ಲಿ ಒಂದಾದ ಪೊಂಗಲ್ ಮತ್ತು ಇದನ್ನು ಜಗತ್ತಿನಾದ್ಯಂತ ತಮಿಳು ಸಮುದಾಯವು ವ್ಯಾಪಕವಾಗಿ ಆಚರಿಸುತ್ತದೆ. ತಮಿಳು ಸೌರ ಕ್ಯಾಲೆಂಡರ್ ಪ್ರಕಾರ, ಪೊಂಗಲ್ ಅನ್ನು ತೈ ತಿಂಗಳಲ್ಲಿ ಆಚರಿಸಲಾಗುತ್ತದೆ. ಇದು ಸೂರ್ಯ ದೇವರಿಗೆ ಸಮರ್ಪಿತವಾದ ನಾಲ್ಕು ದಿನಗಳ ಹಬ್ಬವಾಗಿದೆ. ಇದು ನಾಲ್ಕು ದಿನಗಳ ಹಬ್ಬವಾಗಿದೆ.

## ಸುಭಾಷಿತ

ಹೊಸ ಪುಸ್ತಕವೊಂದನ್ನು ನೀವು ಮನೆಗೆ ತಂದಿರೆಂದರೆ, ಹೊಸ ಹಿತೈಷಿಯೊಬ್ಬ ನಿಮ್ಮ ಮನೆಗೆ ಬಂದನೆಂದು ತಿಳಿಯಬೇಕು.

ಹಾ.ಮಾ. ನಾಯಕ




## ಪೊಲೀಸ್ ಠಾಣೆಗೆ ಎಸ್‌ಪಿ ಅರುಣಾಂಕ್ಷು ಗಿರಿ ಭೇಟಿ

❑ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಪಟ್ಟಣದ ಪೊಲೀಸ್ ಠಾಣೆಗೆ ನೂತನ ಎಸ್‌ಪಿ ಅರುಣಾಂಕ್ಷು ಗಿರಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಯಾವುದೇ ಕಾನೂನು ಬಾಹಿರ ಚಟುವಟಿಕೆಗಳಿಗೆ ಆಸ್ಪದ ನೀಡಬಾರದು.



ರಾತ್ರಿ ಗಸ್ತು ಸಮಯದಲ್ಲಿ ಎಮ್‌ಓಬಿ, ಬೀಗ ಹಾಕಿದ ಮನೆಗಳ ಮೇಲೆ ನಿಗಾ ಇಡಬೇಕು. ಸಮುದಾಯ ಗುಂಪುಗಳ ಶಾಂತಿ ಸಭೆ ಮಾಡುವ ಮೂಲಕ ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ಇಡಬೇಕು. ಎಂದು ಸಿಬ್ಬಂಧಿಗಳಿಗೆ ಸಲಹೆ ನೀಡಿದರು. ಈ ಸಂದರ್ಭದಲ್ಲಿ ಡಿವೈಎಸ್‌ಪಿ ದತ್ತಾತ್ರೇಯ ಕಾರ್ನಾಡ್, ಪಿಐ ಹೊಸಕೇರಪ್ಪ ಸೇರಿದಂತೆ ಪೊಲೀಸ್ ಸಿಬ್ಬಂಧಿಗಳು ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಶಾಲೆಯ ಅಂಗಳದಲ್ಲೇ ತಾರಾಲಯ ಕಾರ್ಯಕ್ರಮ.



❑ ನೈಜ್ಯ ದೆಸೆ ನ್ಯೂಸ್

ಮಾನ್ವಿ: ಪಟ್ಟಣದ ನೇತಾಜಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಂಚಾರಿ ಡಿಜಿಟಲ್ ತಾರಾಲಯ ವತಿಯಿಂದ ನಡೆದ ಶಾಲೆಯ ಅಂಗಳದಲ್ಲೇ ತಾರಾಲಯ ಕಾರ್ಯಕ್ರಮವನ್ನು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಜಿಲ್ಲಾ ಸಂಚಲಕರಾದ ಗಣೇಶ ಬಗೋಡಿ ಚಾಲನೆ ನೀಡಿ ಮಾತನಾಡಿ ಜಿಲ್ಲೆಯ ವಿದ್ಯಾರ್ಥಿಗಳಿಗೆ ಭೌಗೋಳಿಕ ವಿಜ್ಞಾನ ಹಾಗೂ ಖಗೋಳ ವಿಜ್ಞಾನ, ತಾರಾಲಯ ಕುರಿತು, ಮನಮುಟ್ಟುವಂತೆ ಪರಿಣಾಮಕಾ-ರಿಯಾಗಿ ತಿಳಿಸುವುದಕ್ಕೆ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೋಸೈಟಿ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಸಂಚಾರಿ ಡಿಜಿಟಲ್ ತಾರಾಲಯ ಪ್ರದರ್ಶನ ವ್ಯವಸ್ಥೆ ಮಾಡಲಾಗಿದ್ದು ಶಾಲಾ ಮಕ್ಕಳು ತಾರೆ ಜಮೀನ್ ಪರ್ ಡಿಜಿಟಲ್ ಸಂಚಾರಿ ಸೌರವ್ಯೂಹ ಮಂದಿರದಲ್ಲಿ ವಿದ್ಯಾರ್ಥಿಗಳಿಗೆ ಸೌರವ್ಯೂಹದ ಕುರಿತು ದೃಶ್ಯಗಳ ಮೂಲಕ ಮಾಹಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಮಾನ್ವಿ ಪಟ್ಟಣದ ವಿವಿಧ ಶಾಲೆಗಳ ವಿದ್ಯಾರ್ಥಿಗಳು ತಾರೆ ಜಮೀನ್ ಪರ್ ಡಿಜಿಟಲ್ ಸಂಚಾರಿ ಸೌರವ್ಯೂಹ ಮಂದಿರವನ್ನು ವಿಕ್ಷಿಸಿದರು. ಕಾರ್ಯಕ್ರಮದಲ್ಲಿ ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಕೆ.ಈ. ನರಸಿಂಹ, ಕಾರ್ಯದರ್ಶಿಗಳಾದ ವಿಜಯಲಕ್ಷಿ ?ಮೇ, ಸಹಕಾರ್ಯದರ್ಶಿ ರವಿವರ್ಮ, ಜಿಲ್ಲಾ ಕಸಾಪ ಗೌ.ಕಾರ್ಯದರ್ಶಿ ತಾಯಪ್ಪ ಬಿ.ಹೊಸೂರು, ತಾ.ಖಾ.ಶಿ.ಸಂ.ಒಕ್ಕೂಟದ ಪ್ರ.ಕಾರ್ಯದರ್ಶಿ ರಾಜು ತಾಳಿಕೋಟೆ,ಪಕ್ಷಿಪ್ರೇಮಿ ಸಲ್ಲಾವುದಿನ್ನ್ ಸೇರಿದಂತೆ ವಿವಿಧ ಶಾಲೆಗಳ ಮುಖ್ಯಗುರುಗಳು ,ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಕಾರ್ಡಿಯಾಲಜಿಸ್ಟ್ ಹಾಗೂ ಇಎನ್‌ಟಿ ತಜ್ಞರ ನೇಮಕಕ್ಕೆ ಕರವೇ ಸ್ವಾಭಿಮಾನಿ ಸೇನೆ ಒತ್ತಾಯ

❑ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರ: ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ತಕ್ಷಣವೇ ಹೃದಯ ರೋಗ ತಜ್ಞರು ಕಾರ್ಡಿಯಾಲಜಿಸ್ಟ್ ಹಾಗೂ ಕಿವಿ ಮೂಗು ಗಂಟಲು (ಇಎನ್‌ಟಿ) ತಜ್ಞರನ್ನು ನೇಮಕ ಮಾಡಬೇಕೆಂದು ಕರವೇ ಸ್ವಾಭಿಮಾನಿ ಸೇನೆ ತಾಲೂಕ ಅಧ್ಯಕ್ಷ ಜಿಲಾನಿ ಪಾಶ ಆರೋಗ್ಯ ಸಚಿವ-ರಿಗೆ ತಾಲೂಕ ಆರೋಗ್ಯಾಧಿಕಾರಿಗಳ ಮೂಲಕ ಮನವಿಯನ್ನು ಸಲ್ಲಿಸಿ ನಂತರ ಮಾತನಾಡಿದ ಅವರು ಲಿಂಗಸಗೂರು ಸಾರ್ವಜನಿಕ ಆಸ್ಪತ್ರೆಗೆ ಪ್ರತಿದಿನ ನೂರಾರು ಬಡ ಹಾಗೂ ಮಧ್ಯಮ ವರ್ಗದ ಜನರು ಚಿಕಿತ್ಸೆಗಾಗಿ ಆಗಮಿಸುತ್ತಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಹೃದಯ ಸಂಬಂಧಿತ ರೋಗಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪರಿಣಿತ ವೈದ್ಯರ ಅಗತ್ಯತೆ ತೀವ್ರವಾಗಿದೆ ಎಂದು ಸಂಘಟನೆ ತಿಳಿಸಿದೆ. ಸಾರ್ವಜನಿಕ ಆಸ್ಪತ್ರೆಯಲ್ಲಿ ಕಾರ್ಡಿಯಾಲಜಿಸ್ಟ್ ಕೊರತೆ




ಇರುವುದರಿಂದ ಹೃದಯ ಸಮಸ್ಯೆಗಳಿಂದ ಬಳಲುವ ರೋಗಿಗಳು ಖಾಸಗಿ ಆಸ್ಪತ್ರೆಗಳತ್ತ ಹೋಗಬೇಕಾಗಿದ್ದು, ಇದರಿಂದ ಅಪಾರ ಆರ್ಥಿಕ ಹೊರೆ ಎದುರಿಸು ವಂತಾಗಿದೆ. ತುರ್ತು ಸಂದರ್ಭದಲ್ಲಿ ತಕ್ಷಣ ಚಿಕಿತ್ಸೆ ಸಿಗದೆ ಜೀವಾಪಾಯ ಸಂಭವಿಸುವ ಘಟನೆಗಳು ನಡೆಯುತ್ತಿರುವುದು ಆತಂಕಕಾರಿ ವಿಷಯ, ಕಿವಿ ಮೂಗು ಗಂಟಲು. (ಇಎನ್‌ಟಿ) ತಜ್ಞರ ಕೊರತೆಯಿಂದ ಸಂಬಂಧಿತ ರೋಗಗಳಿಂದ ಬಳಲುವ ರೋಗಿಗಳು ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ.

ಬಡ ಹಾಗೂ ಸಾಮಾನ್ಯ ಜನರ ಹಿತದೃಷ್ಟಿಯಿಂದ ಸಾರ್ವಜನಿಕ ಆಸ್ಪತ್ರೆಯಲ್ಲಿ ಶಾಶ್ವತವಾಗಿ ಹೃದಯ ರೋಗ ತಜ್ಞರು ಹಾಗೂ ಇಎನ್‌ಟಿ ತಜ್ಞರನ್ನು ನೇಮಕ ಮಾಡುವುದು ಅತ್ಯಂತ ಅಗತ್ಯವಾಗಿದೆ. ಸಾರ್ವಜನಿಕ ಆಸ್ಪತ್ರೆಗೆ "ಇಕೋ" ಯಂತ್ರ ಸೇ-ರಿದಂತೆ ಅಗತ್ಯ ವೈದ್ಯಕೀಯ ಉಪಕರಣಗಳು ಹಾಗೂ ಮೂಲಭೂತ ಸೌಲಭ್ಯಗಳನ್ನು ಕೂಡ ತಕ್ಷಣ ಒದಗಿಸಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ರವಿಕುಮಾರ ಬರಗುಡಿ, ಅಜೀಜ ಪಾಷ, ಮೋಸೀನ ಖಾನ, ಅಲ್ಲಾದ್ದೀನ ಬಾಬಾ, ತಿಮ್ಮನಗೌಡ, ಬಸನಗೌಡ, ಮಲ್ಲಣ್ಣ, ಮಾರೆಪ್ಪ, ರಹೀಮ್ ಹರೀಫ್, ಪ್ರಭುಗೌಡ, ರಾಜು ನಾಗರಾಜ, ಖಾಸೀಂಸಾಬ, ನಬೀಸಾಬ ಹಾಗೂ ವೀರೇಶ ಹೀರೆಮಠ ಸೇರಿದಂತೆ ಹಲವರು ಇದ್ದರು .

# ಸೆಂಟ್ ಮೇರಿ ಹೈಯರ್ ಮತ್ತು ಹೈಸ್ಕೂಲ್ ನಲ್ಲಿ ಸಂಕ್ರಾಂತಿ ವೈಭವ ಹಳ್ಳಿ ಸೊಗಡಿನ ಸಂಭ್ರಮ

❑ ನೈಜ್ಯ ದೆಸೆ ನ್ಯೂಸ್

**ಸಂಕ್ರಾಂತಿ ವೈಭವವು ಸೂರ್ಯನ ಮಕರ ರಾಶಿ ಪ್ರವೇಶವನ್ನು ಆಚರಿಸುವ, ಸುಗ್ಗಿ ಮತ್ತು ನವೀಕರಣದ ಹಬ್ಬವಾಗಿದೆ, ಇದರಲ್ಲಿ ಎಳ್ಳು-ಬೆಲ್ಲ ವಿನಿಮಯ, ಪುಣ್ಯಸ್ನಾನ, ಜಾನುವಾರು ಪೂಜೆ, ಗಾಳಿಪಟ ಹಾ-ರಿಸುವಿಕೆ, ಸಾಂಪ್ರದಾಯಿಕ ಖಾದ್ಯಗಳ ತಯಾರಿಕೆ (ಮಾದ್ಲಿ, ಸಜ್ಜೆ ರೊಟ್ಟಿ, ಪೊಂಗಲ್), ಮತ್ತು ಕೌಟುಂಬಿಕ ಬಂಧಗಳನ್ನು ಬಲಪಡಿಸುವ ವೈವಿಧ್ಯಮಯವಾದ ಆಚರಣೆಗಳು ಇರುತ್ತವೆ. ಇದು ಕೃಷಿ, ಸಂಸ್ಕೃತಿ ಮತ್ತು ಧರ್ಮದೊಂದಿಗೆ ಬೆರೆತಿದ್ದು, ಎಲ್ಲರಲ್ಲೂ ಪ್ರೀತಿ, ಶಾಂತಿ ಮತ್ತು ಸಮೃದ್ಧಿಯ ಸಂದೇಶವನ್ನು ಸಾರುತ್ತದೆ.**

ತಾಲೂಕಿನ (ಬರ್ಮಾ ಕ್ಯಾಂಪ್) ಆರ್. ಎಚ್.ನಂ.1ರ ಸೆಂಟ್ ಮೇರಿ ಹೈಯರ್ ಮತ್ತು ಹೈಸ್ಕೂಲ್ ನಲ್ಲಿ ಮಂಗಳವಾರದಂದು ಸಂಕ್ರಾಂತಿ ಹಬ್ಬವನ್ನು ಅತ್ಯಂತ ವೈಭವದಿಂದ ಸಡಗರ ಸಂಭ್ರಮದಿಂದ ವಿದ್ಯಾರ್ಥಿಗಳು ಅವರ ಪೋಷಕರು, ಆಡಳಿತ ಮಂಡಳಿಯವರು, ಶಾಲೆಯ ಶಿಕ್ಷಕರು, ಮತ್ತು ಸಿಬ್ಬಂದಿಯವರು, ಸೇರಿ ಒಂದು ಹಳ್ಳಿಯನ್ನೇ ಸೃಷ್ಟಿಮಾಡಿದ್ದರು. ಒಂದು ಸಣ್ಣ ಗುಡಿಸಲು, ಊರ ಭಾವಿ, ಎತ್ತಿನ ಬಂಡಿ, ಹೊಲದಲ್ಲಿನ ರಾಶಿ, ಶಾಲೆಯ ಮಕ್ಕಳು ಮತ್ತು ಶಿಕ್ಷಕರಿಂದ ಸಂಕ್ರಾಂತಿ



ಹಬ್ಬದ ವಿವಿಧ ಶೈಲಿಯ ನೃತ್ಯಗಳು ನೋಡುಗರ ಕಣ್ಮನ ಸೆಳೆದು ಮನಸೋರೆಗೊಂಡರು.

ಈ ಸಂಕ್ರಾಂತಿ ಹಬ್ಬದ ಕಾರ್ಯಕ್ರಮವನ್ನು ರಿಬ್ಬನ್ ಕಟ್ ಮಾಡುವ ಮೂಲಕ ಉದ್ಘಾಟಿಸಿ ಮಸ್ಕಿಯ ಭೂ ನ್ಯಾಯ ಮಂಡಳಿ ಸದಸ್ಯರಾದ ಮಹಾಂತೇಶ ಜಾಲವಾಡಗಿಯವರು ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ನಾವು ಸಣ್ಣವ-ರಿದ್ದಾಗ ಇಂತಹ ಹಬ್ಬಗಳ ಸಡಗರ ಸಂಭ್ರಮ ನೋಡಿದ್ದೇವೆ, ಸಂಕ್ರಾಂತಿ ಹಬ್ಬದ ವೈಭವವನ್ನು ಕಣ್ಣು ತುಂಬಿಕೊಂಡಿದ್ದೇವೆ. ಏಕೆಂದರೆ ಆಗ ಹಳ್ಳಿಗಳಲ್ಲಿ ಎತ್ತುಗಳು, ಬಂಡಿಗಳು, ಹೊಲದಲ್ಲಿ ರಾಶಿಗಳನ್ನು ಸಹ ನೋಡಿದ್ದೇವೆ. ಅದೇ ರೀತಿಯಲ್ಲಿ ಈ ಸೆಂಟ್ ಮೇರಿ ಹೈಯರ್ ಮತ್ತು ಹೈಸ್ಕೂಲ್ ಆಡಳಿತ ಮಂಡಳಿಯವರು ವೈಭವಕರಿಸಿದ್ದನ್ನ ನಾವು ನೀವೆಲ್ಲ ಇಂದು ನೋಡುತ್ತಿದ್ದೇವೆ. ಅಷ್ಟು ಅಚ್ಚುಕಟ್ಟಾಗಿ ಹಳ್ಳಿಯ ವಾತಾವರಣವನ್ನು ಸೃಷ್ಟಿ ಮಾಡಿದ್ದಾರೆ. ಮಕ್ಕಳು ಅವರ ಪೋಷಕರು, ಶಿಕ್ಷಕರು ಹರ್ಷ ವ್ಯಕ್ತಪಡಿಸುತ್ತಿದ್ದಾರೆ. ಜೊತೆಗೆ ನೂರಾರು ಬಡ ವಿದ್ಯಾರ್ಥಿಗಳಿಗೆ ವಿದ್ಯಾದಾನ ಮಾಡುವುದಲ್ಲದೇ ಹಳ್ಳಿಯ ವಾತಾವರಣವನ್ನು ಸಹ ತಿಳಿಯಪಡಿಸಿ ಪ್ರೋತ್ಸಾಹಿಸುತ್ತಿದ್ದಾರೆ ಎಂದರು. ನಂತರ ಕಾಂಗ್ರೆಸ್ ಮುಖಂಡ ಮಲ್ಲನಗೌಡ ಪಾಟೀಲ್ ಗುಂಡಾ ಅವರು ಮಾತನಾಡಿ, ಸಂಕ್ರಾಂತಿ ಅಂದರೆ ಪೈರು, ಕರಾವಳಿ ಭಾಗದಲ್ಲಿ ಪೊಂಗಲ್ ಅಂತಾರೆ. ಪೊಂಗಲ್ ಅಂ-ದರೆ ಅಕ್ಕಿ, ಅನ್ನ, ತುಪ್ಪ, ಹಾಲು, ದೇಶಕ್ಕೆ ಅನ್ನ ಕೊಡುವ ರೈತನ ಮುಖದಲ್ಲಿ ಸಂಕ್ರಾಂತಿ ಅಂದರೆ ಸಂಭ್ರಮ ಇಂತಹ ದೊಡ್ಡ ಸಂಭ್ರಮದ ಸಂಕ್ರಾಂತಿ ಹಬ್ಬವನ್ನು ಶಾಲೆಯ ಆಡಳಿತ ಮಂಡಳಿಯವರು ಮುದ್ದುಮಕ್ಕಳಿಂದ ಆಚರಿಸುತ್ತಿದ್ದಾರೆ ಇದು ಶ್ಲಾಘನೆ ಕೆಲಸ, ದೇಶ ನಡೆಯುತ್ತಿರುವುದು ರೈತ-ರಿಂದ ಅಧಿಕಾರಿಗಳಿಂದಲ್ಲ. ಶಿಕ್ಷಣ ಪಡೆಯುವುದು ಅರಿವಿಕೆ ಮತ್ತು ತಿಳುವಳಿಕೆಗಾಗಿ ಹೊರತು ಅಧಿಕಾರಕ್ಕಾಗಿ ಅಲ್ಲ. ಪ್ರಜ್ಞಾವಂತರನ್ನಾಗಿ, ದೇಶದ ಉತ್ತಮ ಪ್ರಜೆಗಳನ್ನಾಗಿ, ರೂಪಿಸುವಲ್ಲಿ ಸಂಸ್ಥೆಯ ಉದ್ದೇಶವಾಗಿರಬೇಕೆಂದರು.

ತದನಂತರ ಶಾಲೆಯ ಆಡಳಿತ ಮಂಡಳಿ ಅಧ್ಯಕ್ಷರಾದ ಕೆ.ಮಂಜುಳಾ ಪಾಟೀಲ್ ಮಾತನಾಡಿ, ಮಕ್ಕಳು ತಮ್ಮ ಕುಟುಂಬದವರೊಂದಿಗೆ ಈ ಸಂಕ್ರಾಂತಿ ಹಬ್ಬವನ್ನು ಸಂಭ್ರಮಿಸುತ್ತಾ, ಪೊಂಗಲ್ ತಿನ್ನುತ್ತಾ, ಸಂಭ್ರಮ ಸಡಗರದಿಂದ ಆಚರಿಸುವುದನ್ನು ನೋಡುವುದೆ ಒಂದು ಸೌಭಾಗ್ಯ, ಈ ಸಂಕ್ರಾಂತಿ ಹಬ್ಬ ರೈತರು ಬೆಳೆಯುವ ಭೂಮಿ ತಾಯಿಗೆ ಋಣ ತೀ-ರಿಸುವ ಹಬ್ಬವಾಗಿದೆ. ಈ ಸುಗ್ಗಿಯ ಹಬ್ಬ ನಿಮ್ಮೆಲ್ಲರ ಬಾಳಲ್ಲಿ ಖುಷಿ ನೀಡಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ: ಮಸ್ಕಿಯ ಗ್ರೀನ್ ಸಿಟಿ ಲ್ಯಾಂಡ್ ಲಾರ್ಡ್ ಮಲ್ಲಿಕಾರ್ಜುನ, ಕಾಂಗ್ರೆಸ್ ಮುಖಂಡ ಅಮರೇಶ ಕ್ಯಾತನಟ್ಟಿ, ಕೆಎಸ್‌ಆರ್.ಟಿಸಿ ಮಾಜಿ ಕಂಟ್ರೋಲರ್ ಬಸವಂತಪ್ಪ, ಬೀರಪ್ಪ ಗೌಡನಬಾವಿ, ಅರ್ಥಶಾಸ್ತ್ರ ಉಪನ್ಯಾಸಕ ಅಮರೇಶ ಹಿರೇಮಠ ಸಿಂಧನೂರು, ಕನ್ನಡ ಉಪನ್ಯಾಸಕ ಡಾ.ಲಕ್ಷ್ಮಣ, ದೈಹಿಕ ಶಿಕ್ಷಕ ರಾಘವೇಂದ್ರ, ಅಶ್ವಮೇಧ ವೆಲ್ ಫರ್ ಟ್ರಸ್ಟ್ ಹಾಗೂ ಶಾಲೆಯ ಕಾರ್ಯದರ್ಶಿಗಳಾದ ಕೆ.ಬಸನಗೌಡ ಪಾಟೀಲ್, ಮುಖ್ಯ ಗುರುಗಳಾದ ಪ್ರಿಯಾ ಜೈನ್, ಸಹ ಶಿಕ್ಷಕರಾದ ಜಾಕ್ಲಿನ್, ಮಂಜುನಾಥ, ಚಾಂದಪಾಷಾ, ರಾಮಕೃಷ್ಣ, ಬಸಮ್ಮ, ಪವಿತ್ರ, ಶಹಿರಾಭಾನು, ಮರಿಯಮ್ಮ, ಸೋಫಿಯಾ, ಕಾರ್ತಿಕ್, ಶರಣಬಸವ, ರಮೇಶ, ಅರುಣ್, ಸೇ-ರಿದಂತೆ ಪಾಲಕರು, ಮಕ್ಕಳು, ಪಾಲ್ಗೊಂಡು ಸಂಕ್ರಾಂತಿ ಹಬ್ಬದ ಸಂಭ್ರಮವನ್ನು ಆಚರಿಸಿದರು.

## ಸಾಹಿತ್ಯ ಸಿಂಚನ

**ಬೆಳಕಿನೆಡೆಗೆ ನಡೆ ಮನವೇ**

ನೋವುಗಳೆಂಬ ನದಿಯನ್ನು ದಾಟಿ
ನಲಿವೆಂಬ ದಡ ಸೇರು ಮನವೇ
ಅಜ್ಞಾನದಿಂದ ಸುಜ್ಞಾನದ ಕಡೆಗೆ
ನಡಿ ನೀನು ಮೂಡ ಮನವೇ!!

ಕಮರಿ ಹೋದ ಕನಸುಗಳ ನೆನೆದು
ಮಾತು ಮರೆತು ಮೌನವಾಗಿ ಕೂರದೇ
ಉಸಿರು ಕಟ್ಟಿದ ಮನದ ಭಾವವನ್ನು ತೊರೆದು ಬಿಡು
ವಾಸ್ತವ ಬದುಕಿನಡೆಗೆ ಸಾಗಿಬಿಡು !!

ನಶ್ವರವಾದ ಜಗದಲ್ಲಿ ನೋವುಗಳು ಸಹಜ
ನೀ ಅರಿತು ನಡೆ ಪರಮಾತ್ಮನ ಕಡೆ ಮನವೇ
ನಮ್ಮಲ್ಲಿನ ಅರಿವು ನಮಗಾದಗ ಬೆಳಕು ಮೂಡುವುದು
ಇನ್ನಾದರೂ ಸಾಗಲಿ ಜೀವನ ಬೆಳಕಿನಡಿಗೆ!!

ಕೂಡು ಮನವೇ ಸತ್ಯದ ಸದನದಲ್ಲಿ
ಬೆಳಕಿನ ದಾರಿ ತೋರುವವನು ಭಗವಂತ
ಬಾಳಲಿ ಭರವಸೆ ಎಂಬ ಬೆಳಕು ಮೂಡಲಿ
ಸಾಗಲಿ ಸಾರ್ಥಕತೆಯಡೆಗೆ ಬದುಕು
ಬೆಳಕಿನಡೆಗೆ ನಡಿ ನೀ ಮನವೇ!!

ಶ್ರೀ ಮತಿ ಕವಿತಾ ಹಿರೇಮಠ ಕವಿತಾಳ

# ಜನವರಿ 19ರಂದು ಜಿಲ್ಲಾಡಳಿತದಿಂದ ಮಹಾಯೋಗಿ ವೇಮನ ಜಯಂತಿ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 13 (ಕರ್ನಾಟಕ ವಾರ್ತೆ): ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 19ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.**

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ. ಕಲಬುರಗಿಯ ಕನ್ನಡ ಸಾಹಿತ್ಯ ಪರಿಷತ್ತು ಮಾಜಿ ಜಿಲ್ಲಾಧ್ಯಕ್ಷರಾದ ಮಹಿಪಾಲರೆಡ್ಡಿ ಅವರು ಮಹಾಯೋಗಿ ವೇಮನ ಜಯಂತಿ ಕು-ರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಸ್ಕಿಯಲ್ಲಿ ಪ್ರೌಢ ಶಾಲೆ, ಪ್ರಯೋಗಾಲಯ ನೂತನ ಕಟ್ಟಡ ಉದ್ಘಾಟಿಸಿದ ಶಾಸಕ ಆರ್. ಬಸನಗೌಡ ತುರ್ವಿಹಾಳ

❏ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ನಮ್ಮ ಭಾಗದ ವಿದ್ಯಾರ್ಥಿಗಳು ಮುಂಬರುವ ದಿನಮಾನಗಳಲ್ಲಿ ಶಿಕ್ಷಣಕ್ಕೆ ಇನ್ನಷ್ಟು ಹೆಚ್ಚಿನ ಒತ್ತು ನೀಡಿ. ವಿದ್ಯಾರ್ಥಿಗಳ ಜೀವನದಲ್ಲಿ 8 ರಿಂದ 10ನೇ ತರಗತಿ ಬಹುಮುಖ್ಯವಾಗಿದ್ದ-ರಿಂದ ಸಮಯವನ್ನು ವ್ಯರ್ಥ ಮಾಡದೆ ಓದಿಯಲ್ಲಿ ಶ್ರಮ ಪಡೆಬೇಕೆಂದು ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಆರ್.ಬಸನಗೌಡ ತುರವಿಹಾಳ ಹೇಳಿದರು.**

ಪಟ್ಟಣದ ಕೇಂದ್ರ ಶಾಲೆ ಆವರಣದಲ್ಲಿರುವ ಪದವಿ ಪೂರ್ವ ಬಾಲಕಿಂ-ಮರ ಕಾಲೇಜಿನ 2 ನೂತನ ಕಟ್ಟಡ ಮತ್ತು 2 ಪ್ರಯೋಗಲಯಗಳ ಕಟ್ಟಡವನ್ನು ಮಂಗಳವಾರ ಉದ್ಘಾಟಿಸಿ ನಂತರ ಮಾತನಾಡಿದ ಅವರು ಇವತ್ತಿನ ಸ್ಪರ್ಧಾತ್ಮಾಕ ಯುಗದಲ್ಲಿ ವಿದ್ಯಾರ್ಥಿಗಳು ಬರೀ ಪುಸ್ತಕಗಳಿಗೆ ಸಿಮೀತವಾಗಬಾರದು, ಪುಸ್ತಕಗಳ ಜತೆಗೆ ಹೊರಗಿನ ಸಾಮಾನ್ಯ ಜ್ಞಾನವನ್ನು ಪಡೆದುಕೊಳ್ಳಬೇಕು. ಈ ಸ್ಪರ್ಧಾತ್ಮಾಕ ಯುವಗಲ್ಲಿ ವಿದ್ಯಾರ್ಥಿಗಳು ಸಾಮಾಜಿ-ಕ ಜಾಲತಾಣವನ್ನು ಒಳ್ಳೆಯ ಉದ್ದೇಶಕ್ಕಾಗಿ ಬಳಸಿಕೊಳ್ಳಬೇಕು. ಆದರೆ ಇತ್ತೀಚಿನ ದಿನಗಳಲ್ಲಿ ಪ್ರೌಢ ಶಾಲೆ ಮತ್ತು ಕಾಲೇಜ್ ವಿದ್ಯಾರ್ಥಿಗಳ ಕೈಯಲ್ಲಿ ಮೊಬೈಲ್‌ಗಳಿರುತ್ತಾವೆ.

ಆದರೆ ವಿದ್ಯಾರ್ಥಿಗಳು ಮೊಬೈಲ್ ಬಳಕೆಯಿಂದ ಓದಿನ ಕಡೆ ಆಶಕ್ತಿ ತೋ-ರಿತ್ತಿಲ್ಲ. ಈ ಬಗ್ಗೆ ಪಾಲಕರು ಮತ್ತು ಶಾಲಾ-ಕಾಲೇಜುಗಳಲ್ಲಿ ಶಿಕ್ಷಕರು ಮತ್ತು ಉಪನ್ಯಾಸಕರು ಜಾಗೃತಿ ಮೂಡಿಸುವ ಮೂಲಕ ವಿದ್ಯಾರ್ಥಿಗಳ ಮುಂದಿನ ಉತ್ತಮ ಜೀವನ ರೂಪಿಸಲು ಕಾರ್ಯಪ್ರಾವೃತ್ತರಾಗಬೇಕೆಂದು ಕಿವಿಮಾತು ಹೇಳಿದರು. ಪಿಯುಸಿ ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ ಸ್ಥಾನಪಡೆದ ವಿದ್ಯಾರ್ಥಿನಿಯರಿಗೆ ಶಾಸಕರು 10 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತದೆ ಎಂದರು.

ಪುಸ್ತಕ ವಿತರಣೆ: ಇದೇ ಸಂದರ್ಭದಲ್ಲಿ ಶಾಸಕರು ಕಾಲೇಜಿನ ವಿದ್ಯಾರ್ಥಿನಿಯರಿಗೆ ಪುಸ್ತಕ ವಿತರಿಸಿದರು. ಭೂಮಿ ಪೂಜೆ: ಪಟ್ಟಣದ ಕೇಂದ್ರ ಶಾಲೆಯ ನೂತನ 3 ಶಾಲಾ ಕಟ್ಟಡಗಳಿಗೆ ಶಾಸಕರು ಭೂಮಿ ಪೂಜೆ ನೆರವೇರಿಸಿದರು. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ 3 ಶಾಲಾ ಕಟ್ಟಡಗಳಿಗೆ 41 ಲಕ್ಷ ರೂ. ಅನುದಾನ ಬಿಡುಗಡೆಗೊಳಿಸಿದೆ ಎಂದು ಜೆಇ ಗಜಾನನ ತಿಳಿಸಿದರು.





### ಕೇಂದ್ರ ಶಾಲೆ: ಪುಡಾರಿಗಳ ಹಾವಳಿಗೆ ಬ್ರೇಕ್ ಹಾಕಲು ಶಾಸಕರಿಗೆ ಮನವಿ

**ಪಟ್ಟಣದ ಕೇಂದ್ರ ಶಾಲಾ ಆವರಣದಲ್ಲಿ ಪ್ರಾಥಮಿಕ ಶಿಕ್ಷಣದಿಂದ ಕಾಲೇಜ್ ಶಿಕ್ಷಣ ಇರುವುದರಿಂದ ಸಂಜೆ ಹಾಗೂ ರಾತ್ರಿಯ ಸಮಯದಲ್ಲಿ ಆವರಣದಲ್ಲಿ ಮತ್ತು ರಸ್ತೆಯಲ್ಲಿ ಪುಂಡರ ಹಾವಳಿ ಹೆಚ್ಚಾಗಿದೆ. ಅಲ್ಲದೇ ಸಂಜೆಯಾಗುತ್ತಿದ್ದಂತೆ ಆವರಣದಲ್ಲಿ ಅಕ್ರಮ ಚಟುವಟಿಕೆಗಳನ್ನು ನಡೆಸುತ್ತಾರೆ. ಆದ್ದರಿಂದ ಪುಡಾರಿಗಳ ಹಾವಳಿಗೆ ಬ್ರೇಕ್ ಹಾಕುವಂತೆ ಶಾಸಕರಲ್ಲಿ ಉಪನ್ಯಾಸಕ ಮಹಾಂತೇಶ ಮಸ್ಕಿ ಮನವಿ ಮಾಡಿಕೊಂಡಾಗ ಸ್ಥಳದಲ್ಲಿಯೇ ಶಾಸಕರು ಸಿಪಿಐ ರಾಮಪ್ಪ ಜಲಿಗೇರಿ ಅವರಿಗೆ ಶಾಲಾ-ಕಾಲೇಜ್ ಸುತ್ತಲೂ ಗಸ್ತು ಹಾಕಲು ತಿಳಿಸಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತ ಹೂನೂರು, ಪ್ರಾಂಶುಪಾಲ ರಂಗಯ್ಯ ಸೇರಿದಂತೆ ಕಾಲೇಜಿನ ಉಪನ್ಯಾಸಕರು, ಶಾಲಾ ಶಿಕ್ಷಕರು ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿದ್ದರು.**

# ರಜಪೂತ ಸಮಾಜದ ಕಾರ್ಯ ಶ್ಲಾಘನೀಯ: ಸಚಿವ ಶಿವಾನಂದ ಪಾಟೀಲ



❏ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಯಾವುದೇ ಒಂದು ಸಮಾಜದಲ್ಲಿ ಒಗ್ಗಟ್ಟು ಇದ್ದರೆ ಮಾತ್ರ ದೊಡ್ಡ ಕೆಲಸವನ್ನು ಮಾಡಲು ಸಾಧ್ಯ ಯಾರಿಂದಲೂ ಆರ್ಥಿಕ ನೆರವು ತೆಗೆದುಕೊಳ್ಳದೆ ಸಮಾಜದ ವತಿಯಿಂದಲೇ ಮಹಾರಾಣಾ ಪ್ರತಾಪ್ ಸಿಂಹ ಅವರ ಮೂರ್ತಿ ಪ್ರತಿಷ್ಠಾಪನೆ ಹಾಗೂ ವೃತ್ತ ನಿರ್ಮಾಣ ಮಾಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಸಕ್ಕರೆ ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು.**

ಸೋಮವಾರ ಪಟ್ಟಣದಲ್ಲಿ ಖಾಸಗಿ ಕಾರ್ಯಕ್ರಮ ಒಂದರಲ್ಲಿ ಭಾಗವಹಿಸಲು ಆಗಮಿಸಿದ ಸಂದರ್ಭದಲ್ಲಿ ಸಮಾಜ ಬಾಂಧವರ ವಿನಂತಿ ಮೇರೆಗೆ ಮಹಾರಾಣಾ ಪ್ರತಾಪ್ ಸಿಂಹ ವೃತ್ತದ ನಿರ್ಮಾಣ ಹಂತದ ಕಾರ್ಯವನ್ನು ವೀಕ್ಷಿಸಿ ಅವರು ಮಾತನಾಡಿದರು. ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡರು ಮಾತನಾಡಿ ವೃತ್ತದ ಸಂಪೂರ್ಣ ಕಾರ್ಯದ ನಂತರ ಇದರ ಅದ್ದೂರಿ ಉದ್ಘಾಟನೆಯ ಕಾರ್ಯಕ್ರಮ ಇಟ್ಟುಕೊಳ್ಳಿ ಇದಕ್ಕೆ ನಾನು ಮತ್ತು ಸಚಿವ ಶಿವಾನಂದ ಪಾಟೀಲರು ಆಗಮಿಸುತ್ತೇವೆ ಎಂದರು.

ಇದೇ ಸಂದರ್ಭದಲ್ಲಿ ಸಚಿವ ಶಿವಾನಂದ ಪಾಟೀಲ, ಶಾಸಕ ಅಪ್ಪಾಜಿ ನಾಡಗೌಡ ಹಾಗೂ ಬಿ.ಎಸ್.ಪಾಟೀಲ ಯಾಳಗಿ ಇವರನ್ನು ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಈ ಸಮಯದಲ್ಲಿ ರಜಪೂತ ಸಮಾಜದ ಅಧ್ಯಕ್ಷ ಹರಿಸಿಂಗ್ ಮೂಲಿಮನಿ, ಉಪಾಧ್ಯಕ್ಷ ರತನಸಿಂಗ್ ಕೊಕಟನೂರ, ಪ್ರಕಾಶ ಹಜೇರಿ, ವಿಜಯಸಿಂಗ್ ಹಜೇರಿ, ರಘು ಹಜೇರಿ (ಶೇಠ), ಗೋವಿಂದಸಿಂಗ್ ಮೂಲಿಮನಿ, ಸುರೇಶ ಹಜೇರಿ,ಬಾಬು ಹಜೇರಿ, ವಿಠಲ್ ಬೆಕಿನಾಳ, ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಮಹೆಬೂಬ ಕೆಂಭಾವಿ, ಬಸ್ಸು ಕೊಡೇಕಲ್, ರಮೇಶ ಗೌಡಗೇರಿ, ದಿಲೀಪ ಹಜೇರಿ, ಪಿಂಟು ಹಜೇರಿ, ನಿತಿನ್ ವಿಜಾಪುರ, ಪಿಂಟು ತಿವಾರಿ, ಸಂದೀಪ ಬನ್ನಿ, ಸಂತೋಷ ಹಜೇರಿ, ರಾಘು ಹಜೇರಿ, ಗೋವಿಂದಸಿಂಗ್ ಹಜೇರಿ, ಸೂರಜ್ ಹಜೇರಿ, ರಾಜು ಹಜೇರಿ, ವಿಠ್ಠಲ್ ಹಜೇರಿ ಮತ್ತಿತರರು ಇದ್ದರು.

# ಕಲಿಕಾ ಹಬ್ಬ ಇಲಾಖೆಯ ಮಹತ್ವದ ಕಾರ್ಯಕ್ರಮ: ಸಿಆರ್ಪಿ ಯಾಳವಾರ

❏ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಕಲಿಕೆಯನ್ನು ಸಂತೋಷದಾಯಕ ಮತ್ತು ಆಕರ್ಷಿಕ ರೀತಿಯಲ್ಲಿ ಸುಧಾರಿಸಲು ಶಿಕ್ಷಣ ಇಲಾಖೆ ಜಾ-ರಿಗೆ ತಂದ ಪ್ರಮುಖ ಕಾರ್ಯಕ್ರಮ "ಕಲಿಕಾ ಹಬ್ಬ" ವಾಗಿದೆ ಎಂದು ಕೊಣ್ಣೂರ ಸಮೂಹ ಸಂಪನ್ಮೂಲ ವ್ಯಕ್ತಿ ಎಸ್ ಎಸ್ ಯಾಳವಾರ ಹೇಳಿದರು. ತಾಲೂಕಿನ ತಮದಡ್ಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕೊಣ್ಣೂರ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ವಿಶೇಷ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.**

ಶಿಕ್ಷಕ ಎಸ್‌ಎನ್ ಪಾಟೀಲ ಮಾತನಾಡಿ



ಪ್ರತಿ ಶಾಲೆಯ ಮಗುವೂ ಮೂಲಭೂತ ಸಂಖ್ಯಾ ಜ್ಞಾನವನ್ನು ಸಾಧಿಸಲು ಎಫ್ ಎಲ್ ಎನ್ ಕಲಿಕ ಹಬ್ಬವನ್ನು ಜಾರಿಗೆ ತರಲಾಗಿದೆ ಇದರಲ್ಲಿ ಪ್ರಮುಖ ಏಳು ವಿಷಯಗಳ ಮೇಲೆ ಸ್ಪರ್ಧೆಗಳು ನಡೆಯುತ್ತವೆ ಇದರಲ್ಲಿ ಎಲ್ಲ ಮಕ್ಕಳು ಆಸಕ್ತಿಯಿಂದ ಭಾಗವಹಿಸಬೇಕು ಎಂದರು. ಶಿಕ್ಷಕ ನಿಂಗರಾಜ ನೀರಲಗಿ ಮಾತನಾಡಿದರು. ಮುಖ್ಯ ಗುರುಗಳಾದ ಎಲ್.ಎಸ್.ಗಸ್ತಿ ಸಮಾರಂಭವನ್ನು ಉದ್ಘಾಟಿಸಿದರು. ತಮ್ಮದಡ್ಡಿ ಎಚ್ ಪಿ ಎಸ್ ಮುಖ್ಯ ಗುರುಗಳಾದ ಐ.ಎಂ. ಮಡಿವಾಳರ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕ ಎಸ್ ಬಿ ಹಾದಿಮನಿ ಕಾರ್ಯಕ್ರಮ ನಿರ್ವಹಿಸಿದರು.

ಈ ಸಮಯದಲ್ಲಿ ಕ.ರಾ.ಪ್ರಾ.ಶಾ.ಶಿ.ಸಂಘದ ತಾಲೂಕಾ ಗೌರವ ಅಧ್ಯಕ್ಷ ಎಸ್ ಎಸ್ ತೀರ್ಥ, ಟೀಚರ್ಸ್ ಸೊಸೈಟಿ ಉಪಾಧ್ಯಕ್ಷ ಪಿ.ವೈ.ಚಲವಾದಿ, ಮುಖ್ಯ ಗುರುಗಳಾದ ಅಶೋಕ್ ಕೆ ನಾಯಕ, ಶ್ರೀಮತಿ ಕೆ.ಎ.ಹಿರೇಗೌಡರ,ವಿ.ಸಿ. ಕವಡಿಮಟ್ಟಿ,ಸಹ ಶಿಕ್ಷಕ ಎಸ್‌ಎನ್. ಪಾಟೀಲ್, ಸಹ ಶಿಕ್ಷಕಿ ಶ್ರೀಮತಿ ಕೆ.ಜಿ. ತುಂಬಗಿ, ಶಿಕ್ಷಕರಾದ ಎಸ್.ಎಂ.ಬಂಟನೂರ, ಎ.ಆರ್. ಸುಣದಳ್ಳಿ, ನಿಂಗರಾಜ್ ನೀರಲಗಿ, ಆರ್.ವಾಯ್.ಶಿವಯೋಗಿ,ವಿ.ಸಿ. ಕವಡಿಮಟ್ಟಿ,ಸಿದ್ದನಗೌಡ ಕಲಕೇರಿ, ಸಿದ್ದಣ್ಣ ನಾಗೂರ ಒಳಗೊಂಡು ಶಿಕ್ಷಕರು ಹಾಗೂ ಕೊಣ್ಣೂರು ಕ್ಲಸ್ಟರ್ ವ್ಯಾಪ್ತಿಯ ಶಾಲೆಗಳ ವಿದ್ಯಾರ್ಥಿಗಳು ಇದ್ದರು. ವೇದಿಕೆ ಕಾರ್ಯಕ್ರಮದ ನಂತರ ಕಲಿಕಾ ಹಬ್ಬದ 7 ವಿಷಯಗಳ ಮೇಲೆ ವಿದ್ಯಾರ್ಥಿಗಳ ಸ್ಪರ್ಧೆಗಳು ನಡೆದವು.

# ರಾಯಚೂರು ಜಿಲ್ಲಾ ಉತ್ಸವ-2026ಕ್ಕೆ ಕವಿತೆ ಕಳುಹಿಸಲು ಜನವರಿ 14 ಕೊನೆಯ ದಿನ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 13 (ಕರ್ನಾಟಕ ವಾರ್ತೆ): 2026ರ ಜನವರಿ 29, 30 ಮತ್ತು 31ರಂದು ರಾಯಚೂರಿನಲ್ಲಿ ಜಿಲ್ಲಾಡಳಿತದಿಂದ ನಡೆಯಲಿರುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ನಿಮಿತ್ತ ಕವಿಗೋಷ್ಠಿ ನಡೆಸಲು ರಾಯಚೂರು ಜಿಲ್ಲಾಡಳಿತವು ರಾಯಚೂರು ಜಿಲ್ಲಾ ವ್ಯಾಪ್ತಿಯಲ್ಲಿನ ಕವಿಗಳಿಂದ ಸ್ವರಚಿತ ಕವಿತೆಗಳನ್ನು ಆಹ್ವಾನಿಸಿದ್ದು, ಕವಿತೆಗಳನ್ನು ಕಳುಹಿಸಲು ಜನವರಿ 14 ಕೊನೆಯ ದಿನವಾಗಿದೆ.**

ಕವಿತೆಯು ಸ್ವತಂತ್ರ ರಚನೆಯಾಗಿರಬೇಕು. ಕವಿತೆಯನ್ನು ಒಂದು ಪುಟ ಮೀರದಂತೆ ನುಡಿ ಅಥವಾ ಯುನಿಕೋಡ್‌ನಲ್ಲಿ ಟೈಪ್ ಮಾಡಿ ವರ್ಡ್ ಫಾರ್ಮೇಟನಲ್ಲಿ ಇ-ವಿಳಾಸ ಡಿಚುಭ್ಜಿಣಾಡಿಜುರಿಡಿ@ ರಟಚಿಟ.ಛಿಟ ಗೆ ಇ-ಮೇಲ್ ಮಾಡಬಹುದು. ಅಥವಾ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಪತ್ರಿಕಾ ಭವನದ ಮೊದಲನೇ ಮಹಡಿ, ಶ್ರೀ ಪಂಡಿತ ಸಿದ್ದರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರ ಹಿಂದುಗಡೆ, ರೈಲ್ವೆ ನಿಲ್ದಾಣದ ರಸ್ತೆ, ರಾಯಚೂರು ಜಿಲ್ಲೆ, ರಾಯಚೂರು ಇಲ್ಲಿಗೆ ಪೋಸ್ಟ್ ಮಾಡಬಹುದು.

ಅಥವಾ ಮೊಬೈಲ್ ಸಂಖ್ಯೆ 9916111356 ಅಥವಾ 9008462236 ಗೆ ವಾಟ್ಸಪ್ ಮಾಡಬಹುದಾಗಿದೆ. ಕವಿತೆಯೊಂದಿಗೆ ಕಡ್ಡಾಯವಾಗಿ ತಮ್ಮ ಹೆಸರು, ಸ್ಥಳ, ವಿದ್ಯಾರ್ಹತೆ, ದೂರವಾಣಿ ಸಂಖ್ಯೆಯ ವಿವರ, ವಿಳಾಸದ ದಾಖಲೆಗಾಗಿ ಆಧಾರ್ ಕಾರ್ಡ್ ಝರಾಕ್ಸ ಪ್ರತಿ ಮತ್ತು ವಯಸ್ಸಿನ ದಾಖಲೆಗಾಗಿ ಎಸ್ಸೆಸ್ಸೆಲ್ಸಿ ಅಂಕಪಟ್ಟಿ ಅಥವಾ ಬೇರೆ ಯಾವುದೇ ದಾಖಲೆಗಳನ್ನು ಕಳುಹಿಸಬೇಕು. ಕವಿಗಳ ಆಯ್ಕೆಯಲ್ಲಿ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಕೊನೆಯ ದಿನಾಂಕದ ನಂತರ ಬರುವ ಕವಿತೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ರಾಯಚೂರು ಜಿಲ್ಲಾ ಉತ್ಸವದ ಪುಸ್ತಕ ಪ್ರದರ್ಶನ, ವಿಚಾರ ಸಂಕಿರಣ ಹಾಗೂ ಕವಿಗೋಷ್ಠಿ ಸಮಿತಿಯ ಪ್ರಕಟಣೆ ತಿಳಿಸಿದೆ.

# ಸಂಗಾಪೂರದಲ್ಲಿ ನರೇಗಾ ಕೂಲಿ ಕಾರ್ಮಿಕರಿಗೆ ಉಚಿತ ಆರೋಗ್ಯ ಶಿಬಿರ

❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಸಂಗಾಪೂರ ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಕೂಲಿ ಕಾರ್ಮಿಕರಿಗೆ ಜಿಲ್ಲಾ ಪಂಚಾಯತ್ ರಾಯಚೂರು, ತಾಲೂಕು ಪಂಚಾಯಿತಿ ಮಾನ್ವಿ ಹಾಗೂ ಆರೋಗ್ಯ ಇಲಾಖೆ ಮಾನ್ವಿ ಇವರ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಯಿತು.**

ಈ ಸಂದರ್ಭದಲ್ಲಿ ಸುಭಾನ್ ಸಮುದಾಯ ಆರೋಗ್ಯಾಧಿಕಾರಿಗಳು ಮಾತನಾಡಿ, ಚಳಿ ಹೆಚ್ಚಿರುವ ಹಿನ್ನೆಲೆಯಲ್ಲಿ ಬಿಸಿ ನೀರನ್ನು ಕುಡಿಯಲು ಸಲಹೆ ನೀಡಿದರು. ಪ್ರತಿಯೊಬ್ಬ ಕೂಲಿ ಕಾರ್ಮಿಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಕನಿಷ್ಠ ಆರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದರು. ಕಫ ಹೆಚ್ಚಾದರೆ ತಕ್ಷಣ ಪರೀಕ್ಷೆ ಮಾಡಿಸಿಕೊಳ್ಳಬೇಕು, ಮನೆ ಸುತ್ತಮುತ್ತಲಿರುವ ಡಬ್ಬಿ ಹಾಗೂ ಟ್ಯಾಂಕರ್‌ಗಳ ನೀರನ್ನು ವಾರಕ್ಕೊಮ್ಮೆ ಬದಲಾಯಿಸುವುದು



ಅನಿವಾರ್ಯವಾಗಿದ್ದು, ಇದರಿಂದ ಡೆಂಗಿ ಹಾಗೂ ಮಲೇರಿಯಾ ರೋಗಗಳನ್ನು ತಡೆಯಬಹುದು ಎಂದು ಸ್ವಚ್ಛತೆಯ ಮಹತ್ವವನ್ನು ವಿವರಿಸಿದರು. ಶಿಬಿರದಲ್ಲಿ ನರೇಗಾ ಕೂಲಿ ಕಾರ್ಮಿಕರಿಗೆ ಬಿಪಿ, ರಕ್ತ ಪರೀಕ್ಷೆ, ಕಫ ಪರೀಕ್ಷೆ ಸೇರಿದಂತೆ ಅಗತ್ಯ ತಪಾಸಣೆಗಳನ್ನು ನಡೆಸಿ, ಅವಶ್ಯಕತೆ ಇರುವವ-ರಿಗೆ ಸ್ಥಳದಲ್ಲೇ ಔಷಧಿಗಳನ್ನು ವಿತರಿಸಲಾಯಿತು.

ಪಂಚಾಯತಿ ಅಭಿವೃದ್ಧಿ ಅಧಿಕಾರಿ ಆಸ್ರ ಜಬೀನಾ ಖಾನಂ ಮಾತನಾಡಿ, ನರೇಗಾ ಯೋಜನೆಯಡಿ ಕೂಲಿ ಕಾರ್ಮಿಕರು NMMS ತಂತ್ರಾಂಶದಲ್ಲಿ ದಿನಕ್ಕೆ ಎರಡು ಬಾರಿ ಹಾಜರಾತಿ ದಾಖಲಿಸುವುದು ಕಡ್ಡಾಯ ಎಂದು ತಿಳಿಸಿದರು. ಸರ್ಕಾರದ ಆದೇಶದಂತೆ ನರೇಗಾ ಯೋಜನೆಯಡಿ ದಿನದ ಕೂಲಿ ದರವನ್ನು ರೂ. 370/-ಕ್ಕೆ ಹೆಚ್ಚಿಸಲಾಗಿದ್ದು, ಇದು ಕೂಲಿ ಕಾರ್ಮಿಕ-ರಿಗೆ ಸಿಹಿ ಸುದ್ದಿಯಾಗಿದೆ ಎಂದು ಹೇಳಿದರು.



"ವಲಸೆ ಯಾಕ್ರಿ ನಿಮ್ಮೂರಲ್ಲೇ ಉದ್ಯೋಗ ಖಾತರಿ" ಹಾಗೂ ಸ್ತ್ರೀ ಚೇತನ ಅಭಿಯಾನದಡಿ ಗಂಡು?ಹೆಣ್ಣು ಸಮಾನವಾಗಿ ರೂ. 370/- ಕೂಲಿ ನೀಡಲಾಗುತ್ತಿದ್ದು, ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬಕ್ಕೂ ಒಂದು ಆರ್ಥಿಕ ವರ್ಷದಲ್ಲಿ 100 ದಿನಗಳ ಕೆಲಸದ ಭರವಸೆ ಇದೆ. ಒಂದು ಕುಟುಂಬ 100 ದಿನ ಕೆಲಸ ಮಾಡಿದಲ್ಲಿ ರೂ. 37,000/- ಕೂಲಿ ಹಣ ಪಡೆಯಬಹುದು ಎಂದು ವಿವರಿಸಿದರು. ಇದೇ ವೇಳೆ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಜೀವನ್ ಜ್ಯೋತಿ ಯೋಜನೆ ಕುರಿತು ಮಾಹಿತಿ ನೀಡಲಾಯಿತು.

ಸಾಮಾಜಿಕ ಭದ್ರತೆ ಕಲ್ಪಿಸುವ ಉದ್ದೇಶದಿಂದ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷಚೇತನರು ಹಾಗೂ ಗರ್ಭಿಣಿಯರಿಗೆ ಶೇಕಡಾ 50% ಕೆಲಸ ಮಾಡಿದರೂ ಪೂರ್ಣ ಪ್ರಮಾಣದ ಕೂಲಿ ನೀಡಲಾಗುತ್ತದೆ ಎಂದು ತಿಳಿಸಲಾಯಿತು. 3 ವರ್ಷದೊಳಗಿನ ಮಕ್ಕಳನ್ನು ಶಿಶು ಪಾಲನಾ ಕೇಂದ್ರದಲ್ಲಿ ಬಿಟ್ಟು ಕೆಲಸಕ್ಕೆ ಬರಬೇಕು ಹಾಗೂ 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಕರೆದುಕೊಂಡು ಬರಬಾರದು ಎಂದು ಸೂಚನೆ ನೀಡಲಾಯಿತು. ಎನ್‌ಎಂಎಂಎಸ್ ಹಾಜರಾತಿಯನ್ನು ದಿನಕ್ಕೆ ಎರಡು ಬಾರಿ ಕಡ್ಡಾಯವಾಗಿ ತೆಗೆದುಕೊಳ್ಳುವಂತೆ ಸಿಬ್ಬಂದಿಗಳಿಗೆ ಸೂಚಿಸಲಾಯಿತು. ಈ ಸಂದರ್ಭದಲ್ಲಿ ಯಲ್ಲಮ್ಮ ಪ್ರಾಥಮಿಕ ಸಮುದಾಯ ಸುರಕ್ಷಾಧಿಕಾರಿಗಳು, ಈರೇಶ್ ತಾಲೂಕು ಐಇಸಿ ಸಂಯೋಜಕರು, ಆಶಾ ಕಾರ್ಯಕರ್ತೆಯರಾದ ಶ್ರೀದೇವಿ, ನೀಲಮ್ಮ, ಕರಿಬಸಯ್ಯ ಡಿಇಒ, ರಾಯಪ್ಪ ಬಿಎಫ್‌ಟಿ ಸೇರಿದಂತೆ ನರೇಗಾ ಕೂಲಿ ಕಾರ್ಮಿಕರು ಹಾಜರಿದ್ದರು.

## ನೇಮಕಾತಿ ಪ್ರಕಟಣೆ

KSCC ಈ ನೇಮಕಾತಿ 2026–34 ಕ್ಲರ್ಕ್, ಸಹಾಯಕ, ಫಾರ್ಮಸಿಸ್ಟ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ KSCC ಈ ನೇಮಕಾತಿ 2026: 34 ಕ್ಲರ್ಕ್, ಸೇಲ್ಸ್ ಅಸಿಸ್ಟೆಂಟ್, ಫಾರ್ಮಸಿಸ್ಟ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ರಾಜ್ಯ ಸಹಕಾರಿ ಗ್ರಾಹಕ ಒಕ್ಕೂಟ ಲಿಮಿಟೆಡ್ ಜನವರಿ 2026 ರ ಏಖಅಲಅಈ ಅಧಿಕೃತ ಅಧಿಸೂಚನೆಯ ಮೂಲಕ ಕ್ಲರ್ಕ್, ಸೇಲ್ಸ್ ಅಸಿಸ್ಟೆಂಟ್, ಫಾರ್ಮಸಿಸ್ಟ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 07–ಫೆಬ್ರವರಿ–2026 ರಂದು ಅಥ–ವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 09–01–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಮತ್ತು ಶುಲ್ಕ ಪಾವತಿಸಲು ಕೊನೆಯ ದಿನಾಂಕ: 07–ಫೆಬ್ರವರಿ–2026 ಅಧಿಕೃತ ವೆಬ್‌ಸೈಟ್: ksccsf.org/index.html

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಸಿಂಧನೂರಿನ ಕಾರುಣ್ಯಾಶ್ರಮವು ಸಂಸ್ಕೃತಿಯ ಅನುಭವ ಮಂಟಪ ಸೂಫಿ ಡಾ. ಮಸ್ತಾನ್ ವಲಿ ಖಾದ್ರಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಆಂಧ್ರಪ್ರದೇಶದ ಆದ–ೋನಿ ತಾಲೂಕಿನ ಸಂತೆಕೂಡ್ಲೂರು ಗ್ರಾಮದ ಸರ್ವಧರ್ಮ ಸೇವಾಶ್ರಮದ ಪೀಠಾಧಿಪತಿಗಳಾದ ಸೂಫಿ ಡಾ. ಮಸ್ತಾನ್ ವಲಿ ಖಾದ್ರಿ ಅವರು ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮಕ್ಕೆ ಭೇಟಿ ನೀಡಿ ಆಶ್ರಯದಾತರುಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ ಚನ್ನಬಸಯ್ಯಸ್ವಾಮಿ ಹಿರೇಮಠ ಇವರನ್ನು ಸನ್ಮಾನಿಸಿ ಗೌರವಿಸಿ ಸೇವೆಗೆ ಪ್ರೋತ್ಸಾಹಿಸಿ ಆಶೀರ್ವದಿಸಿದರು.**

ಈ ಸಮಯದಲ್ಲಿ ಆಶ್ರಮದ ವತಿಯಿಂದ ಪೂಜ್ಯರನ್ನು ಗೌರವಿಸಲಾಯಿತು. ನಂತರ ಸೂಫಿ ಡಾ. ಮಸ್ತಾನ್ ವಲಿ ಖಾದ್ರಿ ಅವರು ಸುಮಾರು ವರ್ಷಗಳಿಂದ ಸಮಾಜ–ಕ್ಕೆ ಪ್ರಾಮಾಣಿಕ ಸೇವೆಯ ಮೂಲಕ ಗಡಿನಾಡ ಭಾಗದಲ್ಲಿಯೂ ಕೂಡ ಪ್ರತಿಯೊಬ್ಬರ ಪ್ರೀತಿಗೆ




ಕಾರುಣ್ಯಾಶ್ರಮವು ಪಾತ್ರವಾಗಿದೆ. ಜಂಗಮನು ಕಾಯಕಯೋಗಿ ಎನ್ನುವುದು ಕಾರುಣ್ಯ ಆಶ್ರಮದ ಮೂಲಕ ದೃಢಪಟ್ಟಿದೆ. ಅನಾಥರ ನೊಂದವರ ತಮಗರಿವಿಲ್ಲದೇ ಮಲಗಿದ್ದೇನೆ ಎಲ್ಲಾ ಚಟುವಟಿಕೆಗಳನ್ನು ಮಾಡಿಕೊಳ್ಳುವ ಅದೆಷ್ಟೋ ಮಾನವ ಜೀವಿಗಳನ್ನು ಸ್ವಂತ ಕುಟುಂಬದ ರೀತಿ ಅವರನ್ನು ನೋಡಿಕೊಳ್ಳುತ್ತಿರುವುದು ಇದುವೇ ನಿಜವಾದ ಸ್ವರ್ಗ ಎನಿಸಿದೆ. ಬಸವಣ್ಣನವರ ಕಾಯಕವೇ ಕೈಲಾಸ ಎನ್ನುವ ಹಾಕಿ ಸತ್ಯ ಕಾಯಕದ ಹಾದಿಯಲ್ಲಿ ಸಾಗುತ್ತಿರುವ ಕಾರುಣ್ಯ ಆಶ್ರಮ ಸರ್ವಧರ್ಮ ಗುರುಗಳ ಆಶೀರ್ವಾದದ ಅಂ–ದದ ಅರಮನೆಯಾಗಿದೆ. ಈ ನಮ್ಮ ಸಿಂಧನೂ–ರಿನ ಕಾರುಣ್ಯಾಶ್ರಮವು ಸಂಸ್ಕೃತಿಯ ಅನುಭವ ಮಂಟಪ ಇಲ್ಲಿ ಸಂಸ್ಕೃತಿ ಸಂಸ್ಕಾರವನ್ನು ಈ ಕಾರುಣ್ಯ ಕುಟುಂಬದಲ್ಲಿ ಸಾರ್ವಜನಿಕರು ಸೇವೆ ಮಾಡುವ ಮೂಲಕ ಜೀವನದಲ್ಲಿ ಅಳವಡಿಸಿಕೊಳ್ಳುತ್ತಿರುವುದು ನಮ್ಮೆಲ್ಲ–ರಿಗೆ ಸಂತೋಷವನ್ನು ಉಂಟು ಮಾಡಿದೆ ಈ ಆಶ್ರಮದಲ್ಲಿ ಸೇವೆ ಮಾಡಿರುವಂತಹ ಅದೆಷ್ಟೋ ಸೇವಕರ್ತರುಗಳು ವಿಭಿನ್ನ ರೀತಿಯ ಸೇವೆ ಮಾಡಿ ಸಮಾಜಕ್ಕೆ ಮಾದರಿಯಾಗುತ್ತಿರುವುದು ಕಾರುಣ್ಯ ಕುಟುಂಬದ ಘನತೆ ಗೌರವವನ್ನು ಹೆಚ್ಚಿಸುತ್ತಿದೆ.

ಈ ಕಾರುಣ್ಯ ಕುಟುಂಬಕ್ಕೆ ನಮ್ಮೆಲ್ಲರ ನಿರಂತರ ಸಹಾಯ ಸಹಕಾರ ಆಶೀರ್ವಾದ ಸದಾವಕಾಲವಿರುತ್ತದೆ ಎಂದು ಆಶೀರ್ವಚನ ನೀಡಿದರು. ಈ ಕಾರ್ಯಕ್ರಮದಲ್ಲಿ ಸೂಫಿ ಹಾಜಿ ಮಲ್ಲಿಂದ ಬಾಬಾ ಖಾದ್ರಿ ಹಣವಾಳ ಸಂತೆಕೂಡ್ಲೂರು. ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ. ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ ಸಿದ್ದಯ್ಯ ಸ್ವಾಮಿ ಮರಿಯಪ್ಪ ಜ್ಯೋತಿ ಹಾಗೂ ಸಂತೆಕೂಡ್ಲು–ರಿನ ಹಲವಾರು ಸದ್ಭಕ್ತರು ಉಪಸ್ಥಿತರಿದ್ದರು.

## ಮಸ್ಕಿಯ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಲಿಕಾ ಉತ್ಸವಕ್ಕೆ ಶಾಸಕ ಆರ್ ಬಸನಗೌಡ ಚಾಲನೆ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಪಟ್ಟಣದಲ್ಲಿರುವ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕಲಿಕಾ ಉತ್ಸವ ಕಾರ್ಯಕ್ರಮಕ್ಕೆ ಮಂಗಳವಾರ ಖಾದಿ ಗ್ರಾಮದ್ಯೋಗ ನಿಗಮದ ಅಧ್ಯಕ್ಷ ಶಾಸಕ ಆರ್ ಬಸನಗೌಡ ತುರ್ವಿಹಾಳ ಚಾಲನೆ ನೀಡಿದರು.**



ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ ಫೈ ಮುದಾ ಬೇಗಮ್, ಎಚ್. ಬಿ ಮುರಾರಿ, ಅಂದಾನಪ್ಪ ಗುಂಡಳ್ಳಿ, ಎಸ್ ಡಿಎಂಸಿ ಅಧ್ಯಕ್ಷ ಶಬ್ಬೀರ್ ಸಾಬ್, ಅನಿಸ್ ಖಾಜಿ, ನಿಸ್ಸಾರ್ ಅಹ್ಮದ್, ಇಮಾಮಸಾಬ್ ಕಾತರಕಿ ಸೇರಿದಂತೆ ಇನ್ನಿತರ ಕಾಂಗ್ರೆಸ್ ಮುಖಂಡರು ಸೇರಿದಂತೆ ಇನ್ನಿತರರು ಇದ್ದರು.

## ಸ್ವಾಮಿ ವಿವೇಕಾನಂದ ಜಯಂತಿ ಪ್ರಯುಕ್ತ ಮದ್ಲಾಪುರು ಪ್ರೌಢಶಾಲೆಯಲ್ಲಿ ಉಚಿತ ಯೋಗ ಶಿಬಿರ



ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಸ್ವಾಮಿ ವಿವೇಕಾನಂದ ಜಯಂತಿ ಪ್ರಯುಕ್ತ ಪಟ್ಟಣದ ಮದ್ಲಾಪುರು ಪ್ರೌಢಶಾಲೆಯಲ್ಲಿ ಶಾಲಾ ಮಕ್ಕಳಿಗಾಗಿ ಉಚಿತ ಯೋಗ ಶಿಬಿರವನ್ನು ಆಯೋಜಿಸಲಾಯಿತು. ಈ ಶಿಬಿರವನ್ನು ಯೋಗ ಸನ್ನಿಧಿ ಜ್ಞಾನ ವಿದ್ಯಾ ಪೀಠ ಟ್ರಸ್ಟ್, ಮಾನ್ವಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದು, ಯೋಗ ಗುರು ಅನ್ನದಾನಯ್ಯ ಅವರು ಶಾಲಾ ಮಕ್ಕಳಿಗೆ ಯೋಗಾಭ್ಯಾಸವನ್ನು ತರಬೇತಿ ರೂಪದಲ್ಲಿ ತಿಳಿಸಿಕೊಟ್ಟರು.**

ಶಿಬಿರದಲ್ಲಿ ತ್ರಿಕೋಣಾಸನ, ಪದ್ಮಾಸನ, ಗೋಮುಖಾಸನ, ಪಾದಾಹಸ್ತಾಸನ ಸೇರಿದಂತೆ ವಿವಿಧ ಯೋಗಾಸನಗಳು, ಪ್ರಾಣಾಯಾಮಗಳು ಹಾಗೂ ಮುದ್ರೆಗಳ ಅಭ್ಯಾಸವನ್ನು ಮಕ್ಕಳಿಗೆ ಪ್ರಾಯೋಗಿಕವಾಗಿ ಹೇಳಿಕೊಡಲಾಯಿತು. ನಂತರ ಧ್ಯಾನಾಭ್ಯಾಸ ನಡೆಸಿ ಶಿಬಿರವನ್ನು ಸಮರ್ಪಕವಾಗಿ ಮುಕ್ತಾಯಗೊಳಿಸಲಾಯಿತು. ಈ ಸಂದರ್ಭದಲ್ಲಿ ರಾಯಚೂರಿನ ಡಯಟ್ ಶಿಕ್ಷಣಾಧಿಕಾರಿಗಳಾದ ಜೀವನ್ ಸಾಬ್ ಮಾತನಾಡಿ, ರಾಯಚೂರು ಜಿಲ್ಲೆದ್ಯಂತ ಸರಕಾರಿ ಶಾಲಾ ಮಕ್ಕಳಿಗಾಗಿ ನಿರಂತರವಾಗಿ ಯೋಗ ಶಿಬಿರಗಳನ್ನು ಆಯೋಜಿಸುತ್ತಿರುವ ಯೋಗ ಗುರು ಅನ್ನದಾನಯ್ಯ ಅವರ ಸೇವೆ ಶ್ಲಾಘನೀಯವಾಗಿದ್ದು, ಇಂತಹ ಯೋಗ ಶಿಬಿರಗಳು ಮಕ್ಕಳ ಶೈಕ್ಷಣಿಕ ಪ್ರಗತಿ ಹಾಗೂ ಉತ್ತಮ ಫಲಿತಾಂಶಕ್ಕೆ ಸಹಕಾರಿಯಾಗುತ್ತವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಶಾಲೆಯ ಮುಖ್ಯೋಪಾಧ್ಯಾಯರಾದ ನಾಗಪ್ಪ ಮಾತನಾಡಿ, ನಿಯಮಿತ ಯೋಗಾಭ್ಯಾಸದಿಂದ ಮಕ್ಕಳ ನರನಾಡಿಗಳಲ್ಲಿ ರಕ್ತಸಂಚಾರ ಸುಧಾರಿಸಿ ದೇಹದ ಆರೋಗ್ಯ ಹೆಚ್ಚುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಸಹ ಶಿಕ್ಷಕರಾದ ದ್ಯಾವಪ್ಪ, ಶ್ರೀಕಾಂತ್, ಸಂದೀಪ್, ಮಾಜೀದ್ ಅಲಿ ಖಾನ್, ತಸ್ಲೀಮ್ ಸಲೋಮಿ ಸೇರಿದಂತೆ ಶಾಲಾ ಮಕ್ಕಳು ಭಾಗವಹಿಸಿ ಯೋಗ ಶಿಬಿರವನ್ನು ಯಶಸ್ವಿಗೊಳಿಸಿದರು.

## ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (MGNREGA) ಅನ್ನು ಹಂತಹಂತವಾಗಿ ದುರ್ಬಲಗೊಳಿಸುವ ಪ್ರಯತ್ನ ಜಿ. ಕುಮಾರ್ ನಾಯಕ್.

ನೈಜ್ಯ ದೆಸೆ ನ್ಯೂಸ್

**ಇಂದು ರಾಯಚೂರಿನಲ್ಲಿ ಹಿರಿಯ ನಾಯಕರೊಂದಿಗೆ ಪತ್ರಿಕಾಗೋಷ್ಠಿ ನಡೆಸಿದ ಸಂಸದರು ಗ್ರಾಮೀಣ ಭಾರತದ ಲಕ್ಷಾಂತರ ಜನರ ಬದುಕಿಗೆ ಭಾರೀ ಹೊಡೆತ ನೀಡಲಿವೆ,**

1.ಪ್ರಸ್ತಾವಿತ ಬದಲಾವಣೆಗಳು ಗ್ರಾಮೀಣ ಕುಟುಂಬಗಳಿಗೆ ಉದ್ಯೋಗವನ್ನು ಹಕ್ಕಿನಂತೆ ಖಾತ್ರಿ ನೀಡುವ ಒಉಓಖಇಂದ ಮೂಲ ತತ್ವವನ್ನೇ ತೆಗೆದುಹಾಕಿ, ಯಾವ ಗ್ರಾಮಗಳಿಗೆ ಕೆಲಸ "ಅರ್ಹ" ಎಂದು ಕೇಂದ್ರ ಸರ್ಕಾರ ತೀರ್ಮಾನಿಸುವ ಆಯ್ಕೆಯ ಹಾಗೂ ವಿವೇಚನಾತ್ಮಕ ವ್ಯವಸ್ಥೆಯನ್ನು ತರುತ್ತಿವೆ. 2. ಯಾವುದೇ ಸರ್ಕಾರಕ್ಕೆ ನೀತಿಗಳನ್ನು



ರೂಪಿಸುವ ಅಧಿಕಾರ ಇದ್ದರೂ, ಈ ದೂರಾಲೋಚಿತ ಬಲಪಂಥೀಯ ಸುಧಾರಣೆಗಳು ಬಡವರ ಮೂಲಭೂತ ಜೀವನೋಪಾಯ ಹಕ್ಕುಗಳನ್ನು ಕಸಿದುಕೊಳ್ಳುತ್ತಿವೆ. ಸದೇ ಸಮಯದಲ್ಲಿ ಶ್ರೀಮಂತ ಕಾರ್ಪೊರೇಟ್‌ಗಳಿಗೆ ಸಾವಿರಾರು ಕೋಟಿ ರೂಪಾಯಿ ಸಾಲಮನ್ನಾ ಮತ್ತು ತೆ–ರಿಗೆ ಸಡಿಲಿಕೆಗಳನ್ನು ನೀಡಲಾಗುತ್ತಿದೆ. 3. ಹಣಕಾಸು ಆಯೋಗದೊಂದಿಗೆ ಯಾವುದೇ ಸಮಾಲೋಚನೆ ಇಲ್ಲದೆ ಮತ್ತು ಹೆಚ್ಚುವರಿ ಹಣಕಾಸು ಹಂಚಿಕೆಗಳನ್ನು ಖಚಿತಪಡಿಸದೆ, ಈ ಯೋಜನೆಯ ಆರ್ಥಿಕ ಭಾರವನ್ನು ರಾಜ್ಯಗಳ ಮೇಲೆ ತಳ್ಳಲಾಗುತ್ತಿದೆ. ಇದರಿಂದ ಈಗಾಗಲೇ ಸಂಕಷ್ಟದಲ್ಲಿರುವ ರಾಜ್ಯಗಳ ಹಣ–ಕಾಸು ಸ್ಥಿತಿ ಇನ್ನಷ್ಟು ದುರ್ಬಲವಾಗಲಿದೆ. 4. ವರ್ಷಪೂರ್ತಿ ಉದ್ಯೋಗದ ಖಾತರಿಯನ್ನು ನೀಡುತ್ತಿದ್ದ ಒಉಓಖಇಉಂ ಅನ್ನು ಕೇಂದ್ರ ನಿಯಂತ್ರಣದ ಸೀಮಿತ, ಯೋಜನೆ ಆಧಾ–ರಿತ ಮಾದರಿಯಿಂದ ಬದಲಾಯಿಸಲಾಗುತ್ತಿದೆ.

ಇದು ದುರ್ಬಲ ಕಾರ್ಮಿಕರನ್ನು ಬಲವಂತದ ಕಾರ್ಮಿಕ ಸ್ಥಿತಿಯಂತೆ ಕಾಣುವ ಅಪಾಯಕಾರಿ ಪರಿಸ್ಥಿತಿಗಳಿಗೆ ಹಿಂದಕ್ಕೆ ತಳ್ಳುವ ಭೀತಿ ಉಂಟುಮಾಡುತ್ತದೆ. ಈ ಕ್ರಮವು ಭಾರತೀಯ ಸಂವಿಧಾನದ ಆತ್ಮದ ಮೇಲಿನ ನೇರ ದಾಳಿ. ಸಂವಿಧಾನವು ಕೊನೆಯ ವ್ಯಕ್ತಿಗೂ ಗೌರವ ಮತ್ತು ಜೀವನೋಪಾಯವನ್ನು ಖಾತ್ರಿ ನೀಡುತ್ತದೆ. ಗ್ರಾಮೀಣ ಭಾರತದ ಅತ್ಯಂತ ಮಹತ್ವದ ಸಾಮಾಜಿಕ ಭದ್ರತಾ ಜೀವನಾಡಿಯನ್ನು ಕಸಿದುಕೊಳ್ಳುವ ಈ ಕ್ರಮವನ್ನು ನಾವು ದೃಢವಾಗಿ ತಿರಸ್ಕರಿಸುತ್ತೇವೆಯೆಂದು ಸಂಸದರದ ಜಿ ಕುಮಾರ್ ನಾಯಕ್ ವಿವರಿಸಿದರು.

## ರಾಯಚೂರು ಉತ್ಸವ: ಜನವರಿ 25ರಂದು ಮ್ಯಾರಥಾನ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 13 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಜನವರಿ–2026ರ ಮಾಹೆಯಲ್ಲಿ ಜರುಗುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಕಾರ್ಯಕ್ರಮದಲ್ಲಿ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದೆ. ಜನವರಿ 25ರ ಬೆಳಗ್ಗೆ 6 ಗಂಟೆಗೆ ಮ್ಯಾರಥಾನ್ ಓಟವನ್ನು ಹಮ್ಮಿಕೊಳ್ಳಲಾಗಿದ್ದು, ಓಟವು ನಗರದ ಜಿಲ್ಲಾ ಕ್ರೀಡಾಂಗಣದಿಂದ ಆರ್.ಟಿ.ಓ ಸರ್ಕಲ್, ಮಹಾವೀರ್ ಸರ್ಕಲ್ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ಸೇರಲಿದೆ.**


ಪ್ರಥಮ ಬಹುಮಾನ 15 ಸಾವಿರ, ದ್ವಿತೀಯ ಬಹುಮಾನ 10 ಸಾವಿರ ಹಾಗೂ ತೃತೀಯ ಬಹುಮಾನ 5ಸಾವಿರ ರೂ.ಗಳನ್ನು ನೀಡಲಾಗುವುದು. ಆಸಕ್ತರು ಈ ಸ್ಪರ್ಧೆಯ ನೋಡಲ್ ಅಧಿಕಾರಿಗಳಾದ ಯುವಜನಾ ಸೇವಾ ಮತ್ತು ಕ್ರೀಡಾ ಇಲಾಖೆಯ ಚಂದ್ರಶೇಖರ ಹೊಸೂರು ಅವರ ಮೊಬೈಲ್ ಸಂಖ್ಯೆ: 9886551244 ಅಥವಾ ಅಥ್ಲಿಟಿಕ್ ಅಸೋಸಿಯೇಷನ್ ಕಾರ್ಯದರ್ಶಿ ತಿಮ್ಮಾರೆಡ್ಡಿ ಅವರ ಮೊಬೈಲ್ ಸಂಖ್ಯೆ: 9844484481ಗೆ ಸಂಪರ್ಕಿಸಿ ಹೆಸರು ನೋಂದಾಯಿಸಬಹುದಾಗಿದೆ. ಈ ಕ್ರೀಡೆಗಳಲ್ಲಿ ಆಸಕ್ತರು ಭಾಗವಹಿಸಿ ರಾಯಚೂರು ಜಿಲ್ಲೆ ಹೆಮ್ಮೆಪಡುವಂತಹ ಕ್ರೀಡೋತ್ಸವ ಮೂಡಿಬರಲು ಸಹಕರಿಸಿ ರಾಯಚೂರು ಉತ್ಸವವನ್ನು ಯಶಸ್ವಿಗೊಳಿಸಲು ಎಲ್ಲಾ ಕ್ರೀಡಾಪಟುಗಳು ಮತ್ತು ಸಾರ್ವಜನಿಕರಲ್ಲಿ ವಿನಂತಿಸಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## RH No 4 ನಲ್ಲಿ 164ನೇ ಶ್ರೀ ಸ್ವಾಮಿ ವಿವೇಕಾನಂದ ಜಯಂತಿ ಹಾಗೂ 38ನೇ ಶಾಲಾ ವಾರ್ಷಿಕೋತ್ಸವ ಆಚರಣೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಆರ್‌ಎಚ್ ಕಾಲೋನಿ ನಂ.4 ರಲ್ಲಿರುವ ವಿವೇಕಾನಂದ ಶಾಲೆಯಲ್ಲಿ 164ನೇ ಶ್ರೀ ಸ್ವಾಮಿ ವಿವೇಕಾನಂದ ಜಯಂತಿ ಹಾಗೂ 38ನೇ ಶಾಲಾ ವಾರ್ಷಿಕೋತ್ಸವವನ್ನು ಅತ್ಯಂತ ಅರ್ಥಪೂರ್ಣವಾಗಿ ಮತ್ತು ಅದ್ದೂರಿಯಾಗಿ ಆಚರಿಸಲಾಯಿತು.**

ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪರಮ ಪೂಜ್ಯ ಯದ್ದಲದೊಡ್ಡಿ ಶ್ರೀಗಳು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶ್ರೀ ಬಸಲಿಂಗಪ್ಪ ಬಿಇಒ, ಡಿವೈ–ಎಸ್‌ಪಿ ಶ್ರೀ ಚಂದ್ರಶೇಖರ್, ಪಿಎಸ್‌ಐ ಶ್ರೀ ಮೌನೇಶ್ ರಾಥೋಡ್ ಹಾಗೂ ಶ್ರೀ ವಿನೋದ್ ಜೈನ್ ಅವರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಶ್ರೀ ಸ್ವಾಮಿ ವಿವೇಕಾನಂದರ






ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಅವರ ಜೀವನ, ಆದರ್ಶಗಳು ಮತ್ತು ಯುವಜನತೆಗೆ ನೀಡಿದ ಸಂದೇಶಗಳ ಕು–ರಿತು ಗಣ್ಯರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ಭಾಷಣ, ನೃತ್ಯ ಮತ್ತು ದೇಶಭಕ್ತಿಗೀತೆಗಳ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಕಳೆ ನೀಡಲಾಯಿತು.


ಅತಿಥಿಗಳು ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆ ಹಾಗೂ ಶಾಲೆಯ ಪ್ರಗತಿಯನ್ನು ಶ್ಲಾಘಿಸಿ, ವಿದ್ಯಾರ್ಥಿಗಳು ಶಿಸ್ತು, ಪರಿಶ್ರಮ ಮತ್ತು ನೈತಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ವಿದ್ಯಾರ್ಥಿಗಳು ಮತ್ತು ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಸಹಕಾರಿ ರಂಗಕ್ಕೆ ತಾಳಿಕೋಟಿ ಕೊಡುಗೆ ಅಪಾರ: ಸಚಿವ ಪಾಟೀಲ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣ ಪ್ರಮುಖ ವ್ಯಾಪಾರಿ ಕೇಂದ್ರವಾಗಿದ್ದು ಇಲ್ಲಿರುವ ಎಲ್ಲಾ ಸಹಕಾರಿ ಸಂಘಗಳು ಆರ್ಥಿಕವಾಗಿ ಸದೃಢವಾಗಿವೆ ಸಹಕಾರಿ ರಂಗಕ್ಕೆ ಈ ಪಟ್ಟಣದ ಕೊಡುಗೆ ಅಪಾರವಾಗಿದೆ ಎಂದು ಸಕ್ಕರೆ ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು.**

ಸೋಮವಾರ ಪಟ್ಟಣದ ಎಪಿಎಂಸಿ ಆವರಣದಲ್ಲಿ ನಿರ್ಮಾಣಗೊಳ್ಳಲಿರುವ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಪತ್ತಿನ ಸಹಕಾರಿ ಸಂಘದ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಕೇವಲ ಹತ್ತು ವರ್ಷಗಳ ಅವಧಿಯಲ್ಲಿ ಈ ಸಂಘವು ಹೆಮ್ಮರವಾಗಿ ಬೆಳೆದು ಸತತ 6 ವರ್ಷಗಳಿಂದ ಸಹಕಾರಿ ಕ್ಷೇತ್ರದ



ಪ್ರಶಸ್ತಿಯನ್ನು ಪಡೆಯುತ್ತಾ ಬಂದಿದೆ, ಇಲ್ಲಿ ಆದಷ್ಟು ಬೇಗ ಒಂದು ಸುಂದರ ಸುಸಜ್ಜಿತವಾದ ಬ್ಯಾಂಕ್ ಕಟ್ಟಡ ನಿರ್ಮಾಣವಾಗಿ ಶಾಸಕ ಅಪ್ಪಾಜಿ ನಾಡಗೌಡರ ಅಮೃತ ಹಸ್ತದಿಂದಲೇ ಇದು ಉದ್ಘಾಟನೆ ಗೊಳ್ಳುವಂತಾಗಲಿ ಎಂದ ಅವರು ಇಲ್ಲಿಯ ಎಪಿಎಂಸಿ ಅಭಿವೃದ್ಧಿಗಾಗಿ ಮುಂದಿನ ದಿನಗಳಲ್ಲಿ 10 ಕೋಟಿ ಅನುದಾನವನ್ನು ಬಿಡುಗಡೆಗೊಳಿಸಲು ಪ್ರಯತ್ನಿಸುತ್ತೇನೆ. ಈ ಬ್ಯಾಂಕು ಶತಾಯುಷವಾಗಿ ಬೆಳೆದು ಬದುಕಲೆಂದು ಹಾರೈಸುತ್ತೇನೆ ಎಂದರು.

ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಹಾಗೂ ಶಾಸಕ ಅಪ್ಪಾಜಿ ನಾಡಗೌಡರು ನಿರ್ಮಾಣವಾಗಲಿರುವ ಕಟ್ಟಡಕ್ಕೆ ಅಡಿಗಲ್ಲು ನೆರವೇರಿಸಿದರು. ಸಂಘದ ಅಧ್ಯಕ್ಷ ಬಸವರಾಜ ಎನ್.ಹಿಪ್ಪರಗಿ ಅಧ್ಯಕ್ಷತೆ ವಹಿಸಿದ್ದರು. ಇಂಗಳೇಶ್ವರದ ಪೂಜ್ಯ ಡಾ.ಸಿದ್ದಲಿಂಗ ಸ್ವಾಮೀಜಿ ಹಾಗೂ ಶ್ರೀ ಖಾಸ್ಗತೇಶ್ವರ ಮಠದ ಪೂಜ್ಯ ಸಿದ್ದಲಿಂಗ ದೇವರು ಸಾನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಶಿವಪುತ್ರಪ್ಪ ದೇಸಾಯಿ,ವಿಡಿಸಿಸಿ ಬ್ಯಾಂಕ ನಿರ್ದೇಶಕ ಬಿಎಸ್ ಪಾಟೀಲ (ಯಾಳಗಿ), ಸಹಾಯಕ ನಿಬಂಧಕ ಚೇತನ್ ಭಾವಿಕಟ್ಟಿ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಗುರು ತಾರನಾಳ, ಮಲ್ಲನಗೌಡ ಯಾತಗಿರಿ, ಎಪಿಎಂಸಿ ಕಾರ್ಯದರ್ಶಿ ಆರ್ ಎಸ್ ರಾಥೋಡ, ಸಂಘದ ಉಪಾಧ್ಯಕ್ಷ ರವೀಂದ್ರನಾಥ ಪಾಟೀಲ, ಪ್ರಭುಗೌಡ ಮದರ್ಕಲ್, ಸಿದ್ದನಗೌಡ ಪಾಟೀಲ ನಾವದಗಿ, ಸಿ.ಬಿ.ಅಸ್ಕಿ, ಸಂಗನಗೌಡ ಅಸ್ಕಿ, ಮಾಸೂಮಸಾಬ ಕೆಂಭಾವಿ, ನೀಲಮ್ಮಗೌಡತಿ ಪಾಟೀಲ, ರೋಶನ ಡೋಣಿ, ಇಬ್ರಾಹಿಂ ಮನ್ಸೂರ, ನಿರ್ದೇಶಕರಾದ ಹಣಮಗೌಡ ಗೂಗಲ್, ಶರಣಗೌಡ ಇಬ್ರಾಹಿಂಪುರ,ಚಿನ್ನಪ್ಪ ಗೌಡ ಮಾಳಿ, ಸುಭಾಸಚಂದ್ರ ಗುರಡ್ಡಿ ಶಾಂತಗೌಡ ಪಾಟೀಲ, ಶಾಂತಾ ಕಂತಲಗಾವಿ ಸುಜಾತಾ ಮಂಗಳೂರ, ರಮೇಶ್ ನಾಯಕ ವ್ಯವಸ್ಥಾಪಕ ಚಂದ್ರಶೇಖರ ಎನ್ ಪಾಟೀಲ ಮತ್ತಿತರರು ಇದ್ದರು. ಶ್ವೇತಾ ಯರಗಲ್ ಪ್ರಾರ್ಥಿಸಿದರು. ಸಂಗಮೇಶ ದೇಸಾಯಿ ಸ್ವಾಗತಿಸಿದರು. ಸಾಹಿತಿ ಶ್ರೀಕಾಂತ ಪತ್ತಾರ ನಿರೂಪಿಸಿದರು. ನಿರ್ದೇಶಕ ಪ್ರಭುಗೌಡ ಮದರ್ಕಲ್ ವಂದಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### Pharm.D

ಫಾರ್ಮಸಿ ಕ್ಷೇತ್ರದಲ್ಲಿ ಉನ್ನತ ವೃತ್ತಿಪರ ಪದವಿಯಾದ ಫಾರ್ಮ್ ಡಿ (ಡಾಕ್ಟರ್ ಆಫ್ ಫಾರ್ಮಸಿ) ಪದವಿಯ ಬಗ್ಗೆ ಇಲ್ಲಿ ವಿವರಿಸಲಾಗಿದೆ. 6 ವರ್ಷಗಳ ಈ ಕೋರ್ಸ್‌ನ ಅರ್ಹತೆ, ಶುಲ್ಕ, ಉದ್ಯೋಗಾವಕಾಶಗಳು ಮತ್ತು ಬೆಂಗಳೂರಿನ ಪ್ರಮುಖ ಕಾಲೇಜುಗಳ ಮಾಹಿತಿಯನ್ನು ಇದು ಒಳಗೊಂಡಿದೆ. ಪ್ರವೇಶ ಪರೀಕ್ಷೆಗಳು, ವೇತನದ ವಿವರಗಳು ಮತ್ತು ಉದ್ಯೋಗ ನೀಡುವ ಪ್ರಮುಖ ಕಂಪನಿಗಳ ಪಟ್ಟಿಯನ್ನು ಸಹ ನೀಡಲಾಗಿದೆ. ಫಾರ್ಮಾ ಡಿ (Pharm.D) ಎಂಬುದು ಫಾರ್ಮಸಿಯಲ್ಲಿ ವೃತ್ತಿಪರ ಡಾಕ್ಟರೇಟ್ ಪದವಿಯಾಗಿದ್ದು, ಇದು ಕ್ಲಿನಿಕಲ್ ಸ್ಟಡಿ, ರೋಗಿಗಳ ಆರೈಕೆ ಮತ್ತು ಔಷಧಿ ನಿರ್ವಹಣೆಯ ಮೇಲೆ ಕೇಂದ್ರೀಕರಿಸುತ್ತದೆ. ಫಾರ್ಮ್ ಡಿ ಅಂದರೆ ಡಾಕ್ಟರ್ ಆಫ್ ಫಾರ್ಮಸಿ ಆಗಿದೆ. ಫಾರ್ಮ್ ಡಿ ಕೋರ್ಸ್ ಅವಧಿಯು ಒಟ್ಟು 6 ವರ್ಷಗಳಿದ್ದು , ಇದರಲ್ಲಿ ಐದು ವರ್ಷಗಳ ಶೈಕ್ಷಣಿಕ ಅಧ್ಯಯನ ಮತ್ತು ಆಸ್ಪತ್ರೆಯಲ್ಲಿ ಅಥವಾ ಕ್ಲಿನಿಕಲ್ ಸೆಟ್ಟಿಂಗ್‌ನಲ್ಲಿ ಒಂದು ವರ್ಷದ ಇಂಟರ್ನ್‌ಶಿಪ್ ಒಳಗೊಂಡಿರುತ್ತದೆ. ಫಾರ್ಮ್ ಡಿ ಅರ್ಹತಾ ಮಾನದಂಡಗಳ ಪ್ರಕಾರ ಅಭ್ಯರ್ಥಿಗಳು ವಿಜ್ಞಾನ ವಿಭಾಗದಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ವಿಷಯಗಳಲ್ಲಿ ಕನಿಷ್ಠ ಶೇ. 50 ಅಂಕಗಳೊಂದಿಗೆ 12 ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಇನ್ನೂ ಕೆಲವು ವಿಶ್ವವಿದ್ಯಾಲಯಗಳು ಅಥವಾ ಕಾಲೇಜುಗಳು ಈ ಕೋರ್ಸ್‌ಗೆ ಅಭ್ಯರ್ಥಿಗಳು ಪ್ರವೇಶ ಪಡೆಯಲು ಪ್ರವೇಶ ಪರೀಕ್ಷೆಗಳನ್ನು ನಡೆಸುತ್ತವೆ. ಬಿ ಫಾರ್ಮಸಿ ಪದವೀಧರರು ಲ್ಯಾಟರಲ್ ಎಂಟ್ರಿ ಪ್ರವೇಶದ ಮೂಲಕ ಫಾರ್ಮ್ ಡಿ ಪದವಿಯನ್ನು ಪ್ರವೇಶಿಸಬಹುದು. NEET, MHT CET, GPAT, ಇತ್ಯಾದಿಗಳು ಭಾರತದ ಅತ್ಯುತ್ತಮ ಫಾರ್ಮಸಿ ಸಂಸ್ಥೆಗಳಿಗೆ ಪ್ರವೇಶ ಪಡೆಯಲು ಕೆಲವು ಅತ್ಯುತ್ತಮ ಪ್ರವೇಶ ಪರೀಕ್ಷೆಗಳಾಗಿವೆ. ಫಾರ್ಮ್ ಡಿ ಕೋರ್ಸ್ ಪೂರ್ಣಗೊಳಿಸಿದ ನಂತರ, ಪದವೀಧರರು ಕ್ಲಿನಿಕಲ್ ಫಾರ್ಮಾಸಿಸ್ಟ್‌ಗಳು, ಆಸ್ಪತ್ರೆ ಫಾರ್ಮಸಿ ನಿರ್ದೇಶಕರು, ಆಸ್ಪತ್ರೆ ಸಿಬ್ಬಂದಿ ಫಾರ್ಮಸಿಸ್ಟ್‌ಗಳು, ಚಿಲ್ಲರೆ ಫಾರ್ಮಸಿಸ್ಟ್‌ಗಳು, ಔಷಧ ತಜ್ಞರು ಮತ್ತು ಫಾರ್ಮಸಿಸ್ಟ್‌ಗಳಂತಹ ಉದ್ಯೋಗಗಳನ್ನು ಆಯ್ಕೆ ಮಾಡಬಹುದು. ಔಷಧಿ ತಯಾರಿಕಾ ಕಂಪನಿಯಲ್ಲಿ ಮತ್ತು ಶಿಕ್ಷಣ ವಲಯದಲ್ಲಿ ಉಪನ್ಯಾಸಕರಾಗಿ ಕೆಲಸ ಮಾಡಬಹುದು. ಭಾರತದಲ್ಲಿ ಪದವೀಧರರು ಗಳಿಸುವ ಸರಾಸರಿ ಫಾರ್ಮ್ ಡಿ ವೇತನವು 2.30 ಲಕ್ಷದಿಂದ 10ಲಕ್ಷದ ನಡುವೆ ಇರುತ್ತದೆ. ಫಾರ್ಮಾ ಡಿ ಬಳಿಕ ಉದ್ಯೋಗವಕಾಶ ನೀಡುವ ಪ್ರಮುಖ ಕಂಪನಿಗಳು: ಲುಪಿನ್, ಸಿಪ್ಲಾ, ಪಿರಾಮಲ್, ಸನ್ ಫಾರ್ಮಾಸ್ಯುಟಿಕಲ್ಸ್, ಅರಬಿಂದೋ ಫಾರ್ಮಾ, ಡಾ. ರೆಡ್ಡೀಸ್ ಲ್ಯಾಬೋರೇಟರೀಸ್, ಮೈಲಾನ್ ಫಾರ್ಮಾಸ್ಯುಟಿಕಲ್ಸ್ ಇಂಕ್., ಜೈಡಸ್ ಕ್ಯಾಡಿಲಾ, ಇತ್ಯಾದಿ ಔಷಧಿ ತಯಾರಿಕಾ ಕಂಪನಿಯಲ್ಲಿ ನೀವು ಉತ್ತಮ ವೇತನದೊಂದಿಗೆ ಕೆಲಸವನ್ನು ಪಡೆಯಬಹುದು.

## ಸಿರವಾರ, ಮಾನವಿ: ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪುನಃ ಅರ್ಜಿ ಸಲ್ಲಿಸಲು ಜ.15ರವರೆಗೆ ಕಾಲಾವಕಾಶ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 12 (ಕರ್ನಾಟಕ ವಾರ್ತೆ): ಜಿಲ್ಲೆಯ ಸಿರವಾರ, ಮಾನವಿ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶದನ್ವಯ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ.**

ಅರ್ಜಿ ಸಲ್ಲಿಸುವಾಗ ವೆಬ್‌ಸೈಟ್‌ನಲ್ಲಿ ಒಟ್ಟು 4 ವಿವಿಧ ಹಂತಗಳಿದ್ದು, ಅರ್ಜಿ ಸಲ್ಲಿಸುವ 4 ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ 2026ರ ಜನವರಿ 15ರವರೆಗೆ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ನೀಡಲಾಗಿದೆ. ಒಂದನೇ ಹಂತ: ಆನ್‌ಲೈನ್ ತಂತ್ರಾಂಶದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು, ಎರಡನೇ ಹಂತ: ತಮ್ಮ ಭಾವಚಿತ್ರ ಸಹಿಯನ್ನು ಅಪ್‌ಲೋಡ್ ಮಾಡುವುದು, ಮೂರನೇ ಹಂತ: ತಮ್ಮ ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು, ನಾಲ್ಕನೇ ಹಂತ: ತಮ್ಮ ಆಧಾರ್ ಸಂಖ್ಯೆ ನಮೂದಿಸಿ, ಇ–ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಜನವರಿ 15 ರೊಳಗಾಗಿ ವೆಬ್‌ಸೈಟ್ ವಿಳಾಸ: https://karnemakaone.kar.nic.in/abcd/ ನಲ್ಲಿ ಪೂರ್ಣಗೊಳಿಸಬೇಕು. ಆನ್‌ಲೈನ್‌ನಲ್ಲಿ ಅಪೂರ್ಣ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಸಿರವಾರ, ಮಾನವಿ ಇವರನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆಂದು ಸಿರವಾರ, ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರ್ಥಿಕ ಅಭಿವೃದ್ಧಿಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರ: ಸಚಿವ ಪಾಟೀಲ

❑ ನೈಜ್ಯ ದೆಸೆ ನ್ಯೂಸ್



**ತಾಳಿಕೋಟಿ: ಶಿಕ್ಷಣದ ದಾಸೋಹದ ಮೂಲಕ ನಾಡಿನ ಮಠ ಮಾನ್ಯರು ಸಮಾಜದಲ್ಲಿ ಶೈಕ್ಷಣಿಕ ಕ್ರಾಂತಿಯನ್ನು ತಂದರೆ ಸಹಕಾರಿ ಸಂಘ ಸಂಸ್ಥೆಗಳು ರೈತರಿಗೆ ಆರ್ಥಿಕ ಶಕ್ತಿಯನ್ನು ನೀಡಿ ಅವರ ಸಾಮಾಜಿಕ ಬದಲಾವಣೆಗೆ ಕಾರಣವಾಗಿವೆ ಎಂದು ಸಕ್ಕರೆ ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು. ಸೋಮವಾರ ಪಟ್ಟಣದ ಎಪಿಎಂಸಿ ಸಭಾಭವನದಲ್ಲಿ ಶ್ರೀ ಬಸವೇಶ್ವರ ಸೌಹಾರ್ದ ಪತ್ತಿನ ಸಹಕಾರಿ ಸಂಘ ಇದರ ನೂತನ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು.**

ರಾಷ್ಟ್ರೀಕೃತ ಬ್ಯಾಂಕುಗಳಿಂದ ಸಾಲ ಸಕಾಲಕ್ಕೆ ಸಿಗುವುದು ಕಷ್ಟ ಆದರೆ ಸಹಕಾರಿ ಸಂಘಗಳಿಂದ ಅದು ಸರಳವಾಗಿ ಬೇಗನೆ ಸಿಗುತ್ತದೆ ಆದರೆ ಪಡೆದ ಸಾಲ ಸಕಾಲಕ್ಕೆ ಮರುಳಿಸಿ ಸಂಘದ ಪ್ರಗತಿಗೆ ಸಹಕರಿಸಬೇಕು. ಇವತ್ತು ರಾಜ್ಯದ ಸಹಕಾರಿ ಸಂಘಗಳಿಂದ 35 ಲಕ್ಷ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲವನ್ನು ನೀಡಲಾಗಿದೆ ಇದು ಇಡೀ ದೇಶಕ್ಕೆ ಮಾದರಿಯಾಗಿದೆ ಎಂದ ಅವರು ಈ ಬ್ಯಾಂಕಿನ ಆರಂಭಕ್ಕೆ ಸಾಕಷ್ಟು ಶ್ರಮಿಸಿದ ಇದರ ಸಂಸ್ಥಾಪಕ ಅಧ್ಯಕ್ಷ ದಿವಂಗತ ಕಶಟ್ಟಿ ಅವರನ್ನು ಸ್ಮರಿಸುವುದು ಅಗತ್ಯವಾಗಿದೆ ಮನುಷ್ಯ ಜಗತ್ತನ್ನು ಬಿಟ್ಟು ಹೋಗುವಾಗ ತನ್ನ ಒಂದು ನೆನಪು ಬಿಟ್ಟು ಹೋಗಬೇಕು ಅದನ್ನು ಸದಾ ಜನರು ಸ್ಮರಿಸುವಂತಾಗಬೇಕು.

ಈ ಬ್ಯಾಂಕು ಕಡಿಮೆ ಅವಧಿಯಲ್ಲಿ ಇದಕ್ಕೆ ಇಲ್ಲಿರುವ ಆಡಳಿತ ಮಂಡಳಿ ಮತ್ತು ಸಿಬ್ಬಂದಿ ಹಾಗೂ ಸದಸ್ಯರ ಸಹಕಾರವೇ ಕಾರಣ ಎಂದರು. ಕೆ.ಎಸ್.ಡಿ.ಎಲ್. ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡ ಅವರು ಮಾತನಾಡಿ ಸಂಘದ ಕಟ್ಟಡ ಆರಂಭಿಸಲು ಹಲವಾರು ತೊಡಕುಗಳು ಇದ್ದವು ಇವುಗಳನ್ನು ನಿವಾರಿಸಲು ಅಂದಿನ ಸಹಕಾರಿ ಸಚಿವ ಎಚ್.ಟಿ. ಸೋಮಶೇಖರ ಹಾಗೂ ಸಚಿವ ಶಿವಾನಂದ್ ಪಾಟೀಲರು ಸಾಕಷ್ಟು ಸಹಕರಿಸಿದ್ದಾರೆ ಅವರಿಗೆ ನಾನು ಸಂಘದ ಪರವಾಗಿ ಅಭಿನಂದಿಸುತ್ತೇನೆ, ಹಣ ಜೀವನದಲ್ಲಿ ಬಹಳ ಪ್ರಮುಖ ಪಾತ್ರ ವಹಿಸುತ್ತದೆ ಅದರ ಸರಿಯಾದ ವಿನಿಯೋಗ ಅಗತ್ಯವಾಗಿದೆ ಸಹಕಾರಿ ಸಂಘಗಳು ಉಳಿದು ಬೆಳೆಯಲು ಎಲ್ಲರ ಸಹಕಾರದ ಅಗತ್ಯವಿದೆ ಈ ಬ್ಯಾಂಕು ಇದರ ಸಂಸ್ಥಾಪಕ ಅಧ್ಯಕ್ಷ ಕಶೆಟ್ಟಿ ಅವರ ಕನಸಿನ ಕೂಸಾಗಿದೆ ಎಂದರು.

ಶಾಸಕ ರಾಜುಗೌಡ ಪಾಟೀಲ ಮಾತನಾಡಿ ಸಹಕಾರಿ ಕ್ಷೇತ್ರಕ್ಕೆ ಸಚಿವ ಶಿವಾನಂದ ಪಾಟೀಲರ ಕೊಡುಗೆ ಅಪಾರವಾಗಿದೆ, ಸಹಕಾರಿ ಕ್ಷೇತ್ರದಲ್ಲಿ ರಾಜಕೀಯ ಅಗತ್ಯವಿಲ್ಲ, ಎಲ್ಲರೂ ಒಂದಾಗಿ ಕೆಲಸ ಮಾಡಬೇಕಾಗಿದೆ. ಈ ಬ್ಯಾಂಕು ಕಡಿಮೆ ಅವಧಿಯಲ್ಲಿ ಸಾಕಷ್ಟು ಪ್ರಗತಿ ಸಾಧಿಸಿದೆ ಇದಕ್ಕೆ ಆಡಳಿತ ಮಂಡಳಿ ಹಾಗೂ ಸಿಬ್ಬಂದಿಗಳಿಗೆ ಅಭಿನಂದಿಸುತ್ತೇನೆ ಎಂದರು. ವಿಡಿಸಿಸಿ ಬ್ಯಾಂಕ್ ನಿರ್ದೇಶಕ ಬಿ ಎಸ್ ಪಾಟೀಲ ಯಾಳಗಿ ಹಾಗೂ ಜಿ. ನಂಜನಗೂಡ ಸಿಎ, ಮಾತನಾಡಿದರು. ಸಂಘದ ಅಧ್ಯಕ್ಷ ಕಾಶಿನಾಥ ಎಸ್ ಮುರಾಳ ಅಧ್ಯಕ್ಷತೆ ವಹಿಸಿದ್ದರು. ಇಂಗಳೇಶ್ವರದ ಮ.ನಿ.ಪ್ರ. ಜಗದ್ಗುರು ಡಾ.ಸಿದ್ದಲಿಂಗ ಮಹಾಸ್ವಾಮೀಜಿ, ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಸಹಾಯಕ ನಿಬಂಧಕ ಚೇತನ್ ಭಾವಿಕಟ್ಟಿ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಗುರು ತಾರನಾಳ, ಮಲ್ಲಣ್ಣ ಯಾತಗಿರಿ, ವಿವಿ ಸಂಘದ ಅಧ್ಯಕ್ಷ ವಿ ಸಿ ಹಿರೇಮಠ, ಸಹಕಾರಿ ಬ್ಯಾಂಕ್ ಅಧ್ಯಕ್ಷ ಕೆ ಸಿ ಸಜ್ಜನ್, ನಿರ್ದೇಶಕ ಎಂ.ಎಸ್.ಸರಶಟ್ಟಿ, ಎಪಿಎಂಸಿ ಕಾರ್ಯದರ್ಶಿ ಆರ್ ಎಸ್ ರಾಥೋಡ ಹಾಗೂ ಸಂಘದ ಆಡಳಿತ ಮಂಡಳಿ ನಿರ್ದೇಶಕರು ಸದಸ್ಯರು ಉಪಸ್ಥಿತರಿದ್ದರು. ಶಿಕ್ಷಕಿ ಶಿವಲೀಲಾ ಮುರಾಳ ಪ್ರಾರ್ಥಿಸಿದರು. ಸಂಗಮೇಶ ದೇಸಾಯಿ ಸ್ವಾಗತಿಸಿದರು. ಕುಮಾರಿ ತೇಜಸ್ವಿನಿ ಡಿಸಲೆ, ಶ್ರೀಕಾಂತ ಪತ್ತಾರ ಡಾ.ಅನಿಲಕುಮಾರ ಇರಾಜ,ಮಹಾಂತೇಶ ಮುರಾಳ ನಿರೂಪಿಸಿದರು. ಕಾಶಿನಾಥ ಮುರಾಳ ವಂದಿಸಿದರು.

## ರಾಯಚೂರು ಉತ್ಸವ: ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮತ್ತೊಂದು ಸುತ್ತಿನ ಸಿದ್ಧತಾ ಸಭೆ




❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 13 (ಕರ್ನಾಟಕ ವಾರ್ತೆ): ಜನವರಿ 29, 30 ಹಾಗೂ 31ರಂದು ನಿಗದಿಯಾದ ರಾಯಚೂರು ಉತ್ಸವ ಆಚರಣಾ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರ ಅಧ್ಯಕ್ಷತೆಯಲ್ಲಿ ಜನವರಿ 13ರಂದು ಎಡೆದೊರೆ ನಾಡು ರಾಯಚೂರು ಉತ್ಸವ–2026ರ ಮತ್ತೊಂದು ಸುತ್ತಿನ ಸಿದ್ಧತಾ ಸಭೆ ನಡೆಯಿತು.**

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಮೂರನೇ ಸುತ್ತಿನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಉತ್ಸವದ ಹಿನ್ನೆಲೆಯಲ್ಲಿ ಈಗಾಗಲೇ ಎಲ್ಲ ರೀತಿಯಲ್ಲಿ ಸಿದ್ದತೆಗಳು ನಡೆಯುತ್ತಿದ್ದು, ಇನ್ನಷ್ಟು ಚುರುಕುಗೊಳ್ಳಬೇಕು. ಮುಖ್ಯವಾಗಿ ಜನೋತ್ಸವ ರೀತಿಯಲ್ಲಿ ಉತ್ಸವ ನಡೆಸಲು ಜಿಲ್ಲಾಡಳಿತವು ಬದ್ಧವಾಗಿದೆ. ನಾವು ಸಹ ಉತ್ಸವದಲ್ಲಿ ಭಾಗವಹಿಸುತ್ತೇವೆ. ನಮಗೂ ಉತ್ಸವದ ಕಾರ್ಯ ವಹಿಸಿ ಎಂದು ತಿಳಿಸುವ ಜಿಲ್ಲೆಯ ಎಲ್ಲ ಸಂಘ–ಸಂಸ್ಥೆಗಳ, ಗಣ್ಯರ, ನಾಗರಿಕರ, ಯುವಕರ, ನೌಕರರ ಅಭಿಲಾಷೆಯಂತೆ ಎಲ್ಲರ ಸಹಭಾಗಿತ್ವದೊಂದಿಗೆ ಉತ್ಸವ ನಡೆಯುವಂತೆ ಕಾರ್ಯಯೋಜನೆ ರೂಪಿಸಿ ಸಂಬಂಧಿಸಿದ ಆಯಾ ಸಮಿತಿಗಳಲ್ಲಿನ ಅಧ್ಯಕ್ಷರು ಮತ್ತು ಸದಸ್ಯರು ಕಾರ್ಯನುಷ್ಠಾನಗೊಳಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿನ ಕವಿಗಳು, ಲೇಖಕರು, ಚಿಂತಕರು ಮತ್ತು ಬುದ್ಧಿಜೀವಗಳ ಮತ್ತು ಜಾನಪದ ಸೇರಿದಂತೆ ಎಲ್ಲ ಬಗೆಯ ಕಲಾವಿದರಿಗೆ ಉತ್ಸವದಲ್ಲಿ ಅವಕಾಶ ಸಿಗಬೇಕು. ಈ ಕಾರ್ಯವನ್ನು ಆಯಾ ಸಮಿತಿಯ ಸದಸ್ಯರು ಪಾರದರ್ಶಕವಾಗಿ ಮಾಡಬೇಕು. ಪುಸ್ತಕ ಓದುವ ಸಂಸ್ಕೃತಿಗೆ ಆದ್ಯತೆ ಸಿಗುವ ದಿಶೆಯಲ್ಲಿ ಪುಸ್ತಕ ಪ್ರದರ್ಶನ ಮಳಿಗೆ ನಿರ್ಮಾಣ ಸೇರಿದಂತೆ ನಾನಾ ಬಗೆಯ ಕಾರ್ಯಗಳ ಮೂಲಕ ಉತ್ಸವವು ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಲು ಸೂಚನೆ ನೀಡಿದರು. ಎಲ್ಲ ಅತಿಥಿ ಗಣ್ಯರಿಗೆ ಶಿಷ್ಠಾಚಾರದಂತೆ ಉತ್ಸವಕ್ಕೆ ಆಹ್ವಾನಿಸುವ ಕಾರ್ಯವಾಗಬೇಕು.

ನಗರದ ರೈಲ್ವೆ ನಿಲ್ದಾಣ, ಜಿಲ್ಲೆಯ ಎಲ್ಲ ಬಸ್ ನಿಲ್ದಾಣಗಲ್ಲಿ ಮತ್ತು ಇತರೇ ಸ್ಥಳಗಳಲ್ಲಿ ಪೋಸ್ಟರ್ ಮತ್ತು ಬ್ಯಾನರ್ ಅಳವಡಿಸಿ ಪ್ರಚಾರ ಕಾರ್ಯಕ್ಕೆ ಒತ್ತು ಕೊಡಬೇಕು. ಹೊರಗಡೆಯಿಂದ ಉತ್ಸವಕ್ಕೆ ಆಗಮಿಸುವ ಕಲಾವಿದರು ಮತ್ತು ಇನ್ನಿತರರಿಗೆ ಸರಿಯಾದ ರೀತಿಯಲ್ಲಿ ವಸತಿ ಗೃಹಗಳ ವ್ಯವಸ್ಥೆ ಮಾಡಬೇಕು ಎಂದು ಸೂಚನೆ ನೀಡಿದರು. ಉತ್ಸವದಲ್ಲಿ ಕೃಷಿ, ಕರಕುಶಲ, ಫಲಪುಷ್ಪ, ಆಹಾರ ಮೇಳ, ಮತ್ಸ್ಯ ಮೇಳ, ಚಿತ್ರಕಲೆ ಪ್ರದರ್ಶನ ಹಮ್ಮಿಕೊಳ್ಳಲಾಗಿದ್ದು, ಎಲ್ಲಾ ಪ್ರದರ್ಶನಗಳು ಅಚ್ಚುಕಟ್ಟಾಗಿ ನಡೆಯಬೇಕು. ರೈತರನ್ನು ಆಕರ್ಷಿಸುವ ಕೃಷಿ ಉತ್ಸವ ಆಯೋಜಿಸಬೇಕು ಎಂದು ಸೂಚನೆ ನೀಡಿದರು. ರಾಯಚೂರು ಉತ್ಸವದಲ್ಲಿ ನಾನಾ ಸ್ಥಳಗಳ ಮಾಹಿತಿ ಜನತೆಗೆ ಸಿಗುವ ನಿಟ್ಟಿನಲ್ಲಿ ಅಲ್ಲಲ್ಲಿ ಸೂಚನಾ ಫಲಕಗಳನ್ನು ಹಾಕಬೇಕು. ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್ ಹಾಗೂ ಇತರೆ ಸ್ವಯಂ ಸೇವಕ ಸಂಘಗಳ ಸಹಾಯ–ಸಹಕಾರ ಪಡೆಯಬೇಕು ಎಂದು ತಿಳಿಸಿದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ರಾಯಚೂರು ಉತ್ಸವ ಹಿನ್ನೆಲೆಯಲ್ಲಿ ಈಗಾಗಲೇ ರಾಯಚೂರು ಸಿಟಿಯ ಸೌಂದರ್ಯೀಕರಣ ಕಾರ್ಯ ಭರ್ಜರಿ ನಡೆದಿದೆ. ರಸ್ತೆ ಅಗಲೀಕರಣ, ದುರಸ್ಥಿ ಕಾರ್ಯ ನಡೆದಿದ್ದು ಜನತೆ ಸಹಕಾರ ನೀಡಬೇಕು. ನಗರದ ಎಲ್ಲ ಮುಖ್ಯರಸ್ತೆಗಳು ಸುಂದರವಾಗಿ ಕಾಣುವಂತೆ ಪಾಲಿಕೆ ಕೈಗೊಂಡ ಕಾರ್ಯಕ್ಕೆ ಜನತೆ ಸಹಕರಿಸಬೇಕು. ಕಸವನ್ನು ಎಲ್ಲೆಂದರಲ್ಲಿ ಎಸೆಯಬಾರದು. ರಾಯಚೂರು ಸಿಟಿ ಸೇರಿದಂತೆ ಜಿಲ್ಲೆಯ ಎಲ್ಲ ವ್ಯಾಪಾರಸ್ಥರು ಈಗಿನಿಂದಲೇ ರಾಯಚೂರು ಉತ್ಸವದ ಅಲಂಕಾರ ಕಾರ್ಯಕ್ಕೆ ಕಾರ್ಯಯೋಜನೆ ರೂಪಿಸಿ ಸಹಕರಿಸಬೇಕು ಎಂದು ಎಲ್ಲ ವ್ಯಾಪಾರಸ್ಥರಲ್ಲಿ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ್, ತಹಸೀಲ್ದಾರರಾದ ಸುರೇಶ್ ವರ್ಮ, ಅಮರೇಶ ಬಿರಾದಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಸಭೆಯಲ್ಲಿ ಇದ್ದರು.

## ವಲಸೆ ಯಾಕ್ರಿ ನಿಮ್ಮೂರಲ್ಲೆ ಉದ್ಯೋಗ ಖಾತರಿ ಯೋಜನೆಯಡಿ ಗ್ರಾಮಗಳಲ್ಲಿ ಉದ್ಯೋಗ: ಆಸ್ರ ಜಬೀನಾ ಖಾನಂ

❑ ನೈಜ್ಯ ದೆಸೆ ನ್ಯೂಸ್



**ಮಾನ್ವಿ: ತಾಲೂಕಿನ ಸಂಗಾಪೂರ ಗ್ರಾಮದಲ್ಲಿ ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯತಿ ಹಾಗೂ ಆರೋಗ್ಯ ಇಲಾಖೆ ಸಹಯೋಗದಲ್ಲಿ ನಡೆದ ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ನರೇಗಾ ಕೂಲಿ ಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಆಸ್ರ ಜಬೀನಾ ಖಾನಂ ಚಾಲನೆ ನೀಡಿ ಮಾತನಾಡಿ.**

ಸರ್ಕಾರವು ಗ್ರಾಮ ಪಂಚಾಯಿತಿಗಳ ಮೂಲಕ ಗ್ರಾಮೀಣ ಭಾಗದ ಕೃಷಿ ಕೂಲಿಗಳು ಮಹಾನಗರಗಳಿಗೆ ವಲಸೆ ಹೋಗುವುದನ್ನು ತಪ್ಪಿಸುವುದಕ್ಕಾಗಿ ವಲಸೆ ಯಾಕ್ರಿ ನಿಮ್ಮೂರಲ್ಲೆ ಉದ್ಯೋಗ ಖಾತರಿ ಹಾಗೂ ಸ್ತ್ರೀ ಚೇತನ ಅಭಿಯಾನದಡಿಯಲ್ಲಿ ತಮ್ಮ ಗ್ರಾಮದಲ್ಲಿಯೇ ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬದವರು ಒಂದು ಆರ್ಥಿಕ ವರ್ಷದಲ್ಲಿ 100 ದಿನ ಕೆಲಸವನ್ನು ಪಡೆಯುವ ಮೂಲಕ ಗಂಡು ಮತ್ತು ಹೆಣ್ಣಿಗೆ ಸಮಾನವಾಗಿ ಪ್ರತಿ ದಿನಕ್ಕೆ 370 ರೂ ಕೂಲಿಯನ್ನು ನೀಡಲಾಗುವುದು ಅದರಂತೆ 37 ಸಾವಿರ ರೂ ಕೂಲಿಯನ್ನು ಪಡೆಯ ಬಹುದಾಗಿದೆ. ಹಾಗೂ ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆಯಡಿಯಲ್ಲಿ ಕೆಲಸದ ಸ್ಥಳದಲ್ಲಿ ಮೃತಪಟ್ಟಲ್ಲಿ ಕುಟುಂಬದ ಅವಲಂಭಿತರಿಗೆ 2ಲಕ್ಷ ವಿಮೆ ಪರಿಹಾರವನ್ನು ನೀಡಲಾಗುವುದು.

ಸಾಮಾಜಿಕ ಭದ್ರತೆ ಕಲ್ಪಿಸಲು ನರೇಗ ಯೋಜನೆಯಡಿಯಲ್ಲಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರು ಹಾಗೂ ಗರ್ಭಿಣಿಯರಿಗೆ ಕೇಲಸದಲ್ಲಿ ಶೇ 50ರಷ್ಟು ವಿನಾಯಿತಿ ದೊರೆಯುತ್ತದೆ.ಕೂಲಿ ಕಾರ್ಮಿಕರ 3 ವರ್ಷದೊಳಗಿನ ಮಕ್ಕಳನ್ನು ನೋಡಿಕೊಳ್ಳುವುದಕ್ಕೆ ಶಿಶು ಪಾಲನಾ ಕೇಂದ್ರದ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ತಿಳಿಸಿದರು. ಉಚಿತ ಆರೋಗ್ಯ ಶಿಬಿರದಲ್ಲಿ ಆರೋಗ್ಯ ಇಲಾಖೆಯ ಸಮುದಾಯ ಆರೋಗ್ಯ ಅಧಿಕಾರಿ ಸುಭಾನ್ ನರೇಗಾ ಕೂಲಿ ಕಾರ್ಮಿಕರಿಗೆ ರಕ್ತದೊತ್ತಡ,,ಮಧುಮೇಹ.ರಕ್ತದ ಕ್ಯಾನ್ಸರ್, ಕಫ,ಸೇರಿದಂತೆ ಅಗತ್ಯ ಆರೋಗ್ಯ ತಪಾಸಣೆ ನಡೆಸಿ ಔಷಾಧಿಗಳನ್ನು ವಿತರಿಸಿದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಸಮುದಾಯ ಸುರಕ್ಷ ಅಧಿಕಾರಿ ಯಲ್ಲಮ್ಮ , ತಾಲೂಕ ಐ.ಇ.ಸಿ. ಸಂಯೋಜಕರಾದ ಈರೇಶ್, ಆಶಾ ಕಾರ್ಯಕರ್ತೆಯರಾದ ಶ್ರೀ ದೇವಿ,ನೀಲಮ್ಮ ,ಕರಿಬಸಯ್ಯ ಡಿ.ಇ.ಒ. ,ರಾಯಪ್ಪ ಬಿ .ಎಫ್. ಟೀಗಳು ಹಾಗೂ ನರೇಗ ಕೂಲಿ ಕಾರ್ಮಿಕರು ಇದ್ದರು.

## ಮಗುವಿನ ಒಂದು ವರ್ಷ ವಯಸ್ಸಿನೊಳಗೆ 12 ಮಾರಕ ರೋಗಗಳ ತಡೆಗೆ ಉಚಿತವಾಗಿ ಲಸಿಕೆ ಹಾಕಿಸಿ:ಬಸಯ್ಯ.

❑ ನೈಜ್ಯ ದೆಸೆ ನ್ಯೂಸ್




**ರಾಯಚೂರು: ಮಕ್ಕಳ ಬಾಲ್ಯದಲ್ಲಿ ಕಂಡುಬರುವ ಮಾರಣಾಂತಿಕ ಕಾಯಿಲೆಗಳ ನಿಯಂತ್ರಣಕ್ಕೆ ಹುಟ್ಟಿದ ದಿನದಿಂದ ಒಂದು ವರ್ಷದೊಳಗೆ ಆರೋಗ್ಯ ಇಲಾಖೆಯ ಮೂಲಕ ಉಚಿತವಾಗಿ ಹಾಕಲಾಗುವ ಲಸಿಕೆಗಳನ್ನು ತಪ್ಪದೆ ಹಾಕಿಸಲು ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ತಾಯಂದಿರಿಗೆ ಹಾಗೂ ಪಾಲಕರಲ್ಲಿ ಮನವಿ ಮಾಡಿದರು.**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ರಾಯಚೂರು ನಗರದ ಹರಿಜನವಾಡಾ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ದೇವಿನಗರ ಅಂಗನವಾಡಿ ಕೇಂದ್ರದಲ್ಲಿ ಲಸಿಕಾ ಕಾರ್ಯಕ್ರಮದಲ್ಲಿ ಮಕ್ಕಳೊಂದಿಗೆ ಆಗಮಿಸಿದ ಪಾಲಕರಿಗೆ ಆರೋಗ್ಯ ಶಿಕ್ಷಣ ನೀಡಿ, ಮಗುವಿಗೆ ಬಾಲ್ಯಾವಧಿ ಕಾಡುವ ಮಾರಕ ರೋಗಗಳನ್ನು ತಡೆಗಟ್ಟಲು ವಯಸ್ಸಿಗನುಸಾರವಾಗಿ ಉಚಿತವಾಗಿ ಲಸಿಕೆಗಳನ್ನು ಹಾಕಲಾಗುತ್ತಿದ್ದು, ಅವುಗಳೆಂದರೆ ಪೋಲಿಯೋ ರೋಗಕ್ಕೆ ಪೋಲಿಯೋ ದ್ರಾವಣ, ಬಾಲಕ್ಷಯಕ್ಕೆ ಬಿಸಿಜಿ ಲಸಿಕೆ, ಕಾಮಾಲೆ ರೋಗಕ್ಕೆ ಹೆಪಟೈಟಿಸ್ ಚುಚ್ಚುಮದ್ದು, ಗಂಟಲು ಮಾರಿ, ನಾಯಿಕೆಮ್ಮು ಧನುರ್ವಾಯು ರೋಟ ವೈರಸ್, ಹೆಚ್ ಇನ್‌ಫ್ಲ್ಯುಯೆಂಜಾ, ಕಾಮಾಲೆ ಗಾಗಿ ಪೆಂಟಾವೈಲೆಂಟ್ ಲಸಿಕೆ,

ರೋಟಾವೈರಸ್ ಅತಿಸಾರಬೇದಿ ಗೆ ನಿಮೋಕಾಕಲ್ ಲಸಿಕೆ, ಮೆದುಳು ಜ್ವರ ರೋಗಕ್ಕೆ ಜಾಪನೀಸ್ ಎನ್ಸ್‌ಪಲಿಟಿಸ್ ಲಸಿಕೆ, ದಡಾರ ರೂಬೆಲ್ಲಾ ರೋಗಕ್ಕೆ ಮಿಸಲ್ಸ್ ರೂಬೆಲ್ಲಾ ಲಸಿಕೆ, ಹಾಗೂ ಸಂಜೆಯ ಹೊತ್ತು ಕಂಡುಬರುವ ಇರುಳುಗಣ್ಣು ರೋಗಕ್ಕೆ ವಿಟಾಮಿನ್–ಎ ಅನ್ನಾಂಗ ದ್ರಾವಣ, ನೀಡಲಾಗುತ್ತದೆ. ಇವೆಲ್ಲವುಗಳನ್ನು ಮಗುವಿನ ಒಂದು ವರ್ಷದೊಳಗೆ ಹಾಕಲಾಗುವುದು, ಕೆಲವು ರೋಗಗಳಿಗೆ ಅಂದರೆ ಪೋಲಿಯೋ, ಗಂಟಲುಮಾರಿ, ನಾಯಿ ಕೆಮ್ಮು, ಧನುರ್ವಾಯು, ದಡಾರ–ರೂಬೆಲ್ಲಾ ಮೆದುಳು ಜ್ವರ, ಕ್ಕೆ 16 ರಿಂದ 23 ತಿಂಗಳು ಒಳಗೆ ಹೆಚ್ಚುವರಿಯಾಗಿ ಬೂಸ್ಟರ್ ಡೋಸ್ ರೂಪದಲ್ಲಿ ನೀಡಲಾಗುವುದು.

5 ರಿಂದ 6 ವರ್ಷದಲ್ಲಿ ಪುನಃ ಗಂಟಲುಮಾರಿ, ನಾಯಿ ಕೆಮ್ಮು, ಧನುರ್ವಾಯು, ರೋಗಿಗಳಿಗೆ ಎರಡನೇಯ ಬಾರಿ ಬೂಸ್ಟರ್ ಡೋಸ್ ನೀಡಲಾಗುವುದು. ಈ ಹಿನ್ನಲೆಯಲ್ಲಿ ದಯವಿಟ್ಟು ಸಾರ್ವಜನಿಕರು ತಮ್ಮ ಮನೆಗಳ ಹತ್ತಿರ ಲಸಿಕೆ ಹಾಕುವ ಅಂಗನವಾಡಿ ಕೇಂದ್ರಗಳಗಳಲ್ಲಿ ತಪ್ಪದೆ ತೆರಳಿ ಲಸಿಕೆ ಹಾಕಿಸಲು ಮನವಿ ಮಾಡಿದರು. ಪೌಷ್ಟಿಕ ಪುನಶ್ಚೇತನ ಕೇಂದ್ರದ ಸದುಪಯೋಗಕ್ಕೆ ಮನವಿ ಮಗುವಿನ ಬೆಳವಣಿಗೆಗೆ ಅಡ್ಡಿಯಾಗುವ ಅಪೌಷ್ಟಿಕತೆಯನ್ನು ನಿವಾರಿಸಲು ಸರಕಾರವು ರಾಯಚೂರು ನಗರದ ರಿಮ್ಸ್ ಆಸ್ಪತ್ರೆಯ ನಾಲ್ಕನೆಯ ಮಹಡಿಯಲ್ಲಿ ಪೌಷ್ಟಿಕ ಪುನಶ್ಚೇತನ ಕೇಂದ್ರ (ಎನ್‌ಆರ್‌ಸಿ) ಇದ್ದು ಇಲ್ಲಿ 14 ದಿನಗಳ ಕಾಲ ಮಗುವಿಗೆ ಪೌಷ್ಟಿಕಾಹಾರವನ್ನು ವೈಜ್ಞಾನಿಕವಾಗಿ ನೀಡುವ ಜೊತೆಗೆ ಮಗುವಿಗೆ ಅಗತ್ಯ ಚಿಕಿತ್ಸೆ ನೀಡಲಾಗುವುದು. ಅಲ್ಲದೆ ತಾಯಂದಿರಿಗೆ 14 ದಿನಗಳ ಕಾಲ ಪ್ರತಿ ದಿನಕ್ಕೆ 370/– ರೂಪಾಯಿಯಂತೆ ಎನ್‌ಆರ್‌ಇಜಿ ಅಡಿಯ ಕೂಲಿಗೆ ಸಮಾನವಾದ ಮೊತ್ತವನ್ನು ಸಹ ಬ್ಯಾಂಕ್ ಖಾತೆಗೆ ಸಂದಾಯ ಮಾಡಲಾಗುವುದು.

ಜನನದ ಮಧ್ಯ ಅಂತರಕ್ಕಾಗಿ ತಾತ್ಕಾಲಿಕ ವಿಧಾನಗಳು ಇವೆ ಮೊದಲ ಹೆರಿಗೆ ನಂತರ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕನಿಷ್ಠ 3 ವರ್ಷಕ್ಕೆ ಕಡ್ಡಾಯವಾಗಿ ಮುಂದುಡುವುದು ತಾಯಿಯ ಮತ್ತು ಮಗುವಿನ ಆರೋಗ್ಯದ ದೃಷ್ಟಿಯಿಂದ ಮಹತ್ವವಾಗಿದ್ದು, ಇದಕ್ಕಾಗಿ ಸರಳವಾದ ಪ್ರತಿ ಮೂರು ತಿಂಗಳಿಗೊಂದು ಸಾರಿ ಹಾಕಿಸುವ ಅಂತರ ಚುಚ್ಚುಮದ್ದು ಎಲ್ಲ ಆಸ್ಪತ್ರೆಯಲ್ಲಿ ಹಾಕಲಾಗುವುದು. ಅಲ್ಲದೆ ಕಾಪರ–ಟಿ, ನುಂಗು ಮಾತ್ರೆ ಮತ್ತು ಪುರುಷರಿಗೆ ನಿರೋಧ ಉಚಿತವಾಗಿ ಲಭ್ಯವಿದೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಈರಮ್ಮ, ನಾಗವೇಣಿ ಆಶಾ ಕಾರ್ಯಕರ್ತೆ,ನಾಗವೇಣಿ ಅಂಗನವಾಡಿ ಕಾರ್ಯಕರ್ತೆಯರಾದ ರೂಪಾ, ಜಿಂದಮ್ಮ, ಮಹಾದೇವಿ ಸೇರಿದಂತೆ ತಾಯಂದಿರು ಉಪಸ್ಥಿತರಿದ್ದರು.